'ನನಗೆ ವಿನಯ್ ಅವರು ಕಥೆ ಹೇಳಿದಾಗ ಕಥೆ ಕೇಳಿ ಬಹಳ ಇಷ್ಟವಾಯಿತು. ನಂತರ ಟೀಸರ್ ನೋಡಿದ ಮೇಲಂತೂ ಅವರು ಹೇಳಿದಕ್ಕಿಂತ ಇನ್ನೂ ಚೆನ್ನಾಗಿ ಮೂಡಿ ಬಂದಿತ್ತು. ಒಳ್ಳೆಯ ತಂಡದ ಜೊತೆಗೆ ಕೆಲಸ ಮಾಡಿದ್ದು ಖುಷಿಯಿದೆ. ನನ್ನ ಪಾತ್ರ ಕೂಡ ಚೆನ್ನಾಗಿದೆ' ಎಂದು ನಾಯಕಿ ದಿಶಾ ರಮೇಶ್ ತಿಳಿಸಿದರು. ನಟಿ ಹರಿಣಿ ಶ್ರೀಕಾಂತ್, ನಟರಾದ ನಾಗೇಂದ್ರ ಅರಸ್, ಡಾಲಾ ಶರಣ್, ಕಲಾರತಿ ಮಹಾದೇವ್, ಛಾಯಾಗ್ರಾಹಕ ಅಲೆನ್ ಭರತ್ , ಸಂಕಲನಕಾರ ಸಿದ್ದಾರ್ಥ್ ಆರ್ ನಾಯಕ್ ಮತ್ತು ಸಂಗೀತ ನಿರ್ದೇಶಕ ಯು.-ಎಂ.ಸ್ಟೀವನ್ ಸತೀಶ್ ಮುಂತಾದವರು 'ದಿ' ಚಿತ್ರದ ಕುರಿತು ಮಾತನಾಡಿದರು. ಮೇ 16ರಂದು ಬಿಡುಗಡೆಯಾಗಲಿರುವ ಈ ಚಿತ್ರವನ್ನು ವಿಶಾಲ ಕರ್ನಾಟಕಕ್ಕೆ ವಿಜಯ್ ಫಿಲಂಸ್ ಅವರು ಹಂಚಿಕೆ ಮಾಡಲಿದ್ದಾರೆ.

## ತೆರೆಗೆ ಬರಲು ಸಿದ್ಧವಾದ ಸಸ್ಪೆನ್ಸ್, ಥ್ರಿಲ್ಲರ್ ನ 'ಜಾವ ಕಾಫಿ'



ಕನ್ನಡ ಚಿತ್ರರಂಗದಲ್ಲಿ ನಿರ್ದೇಶಕಿಯರ ಸಂಖ್ಯೆ ಬಹಳ ಕಡಿಮೆ. ಈಗ ಆ ಸಾಲಿಗೆ ಸಾನ್ವಿಕ ಸೇರ್ಪಡೆಯಾಗಿದ್ದಾರೆ. ಕೇರಳ ರಾಜ್ಯದವರಾದ ಸಾನ್ವಿಕ ತಮ್ಮ ಮೊದಲ ನಿರ್ದೇಶನದ ಚಿತ್ರವನ್ನು ಕನ್ನಡದಲ್ಲಿ ಮಾಡಿರುವುದು ವಿಶೇಷ. ನಿರ್ದೇಶನ ಮಾತ್ರ ಅಲ್ಲ. ನಿರ್ಮಾಪಕಿ, ನಾಯಕಿ, ಸಾಹಸ ನಿರ್ದೇಶಕಿ ಹೀಗೆ ಒಂಭತ್ತು ಆಯಾಮಾಗಳಲ್ಲಿ ಸಾನ್ವಿಕ ಕೆಲಸ ಮಾಡಿದ್ದಾರೆ. ಅಜಯ್ ವರ್ಧನ್ ಈ ಚಿತ್ರದ ನಾಯಕರಾಗಿ ನಟಿಸಿದ್ದು, ಇತ್ತೀಚೆಗ ಈ ಚಿತ್ರದ ಟ್ರೇಲರ್ ಹಾಗೂ ಹಾಡುಗಳ ಬಿಡುಗಡೆ ನೆರವೇರಿತು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. 'ಜಾವ ಕಾಫಿ' ಚಿತ್ರ ನನ್ನ ಕನಸು ಹಾಗೂ ನನ್ನ ಮನಸ್ಸು ಎಂದು ಮಾತನಾಡಿದ ನಿರ್ದೇಶಕಿ, ನಾಯಕಿ, ನಿರ್ಮಾಪಕಿ ಸಾನ್ವಿಕ, ಚಿತ್ರ ನಿರ್ದೇಶನ ಮಾಡಬೇಕೆಂಬುದು ನನ್ನ ಹದಿನೈದು ವರ್ಷಗಳ ಕನಸು. ಈಗ ಅದು ನನಸಾಗಿದೆ. ನಾನು ಕೇರಳದವಳಾಗಿದರೂ ನನ್ನ ಮೊದಲ ಚಿತ್ರವನ್ನು ಕನ್ನಡದಲ್ಲಿ ಮಾಡಿದ್ದೇನೆ. ನಿರ್ದೇಶಕಿ, ನಿರ್ಮಾಪಕಿ, ನಾಯಕಿ, ಕಥೆ, ಚಿತ್ರಕಥೆ, ಸಾಹಸ ನಿರ್ದೇಶನ ಸೇರಿದಂತೆ ಈ ಚಿತ್ರದ ಒಂಭತ್ತು ಆಯಾಮಗಳಲ್ಲಿ ಕೆಲಸ ಮಾಡಿದ್ದೇನೆ. ಕನ್ನಡದಲ್ಲಿ ನಿರ್ದೇಶನ ಮಾಡಲು ನನಗೆ ಅಸೋಸಿಯೇಟ್ ಡೈರೆಕ್ಟರ್ ವಸಂತ್ ಸಹಾಯ ಮಾಡಿದರು. "ಜಾವ ಕಾಫಿ" ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಚಿತ್ರವಾಗಿದೆ. ಬೆಂಗಳೂರು, ಮಂಗಳೂರು, ಕೇರಳ ಮುಂತಾದ ಕಡೆ ಚಿತ್ರೀಕರಣ ನಡೆದಿದೆ. ಚಿತ್ರದ ಮೊದಲ ಪ್ರತಿ ಸಿದ್ದವಾಗಿದೆ. ಸದ್ಯದಲ್ಲೇ ಸೆನ್ಸಾರ್ ಮಂಡಳಿ ಚಿತ್ರವನ್ನು ವೀಕ್ಷಿಸಲಿದೆ. ಆನಂತರ ಬಿಡುಗಡೆ ದಿನಾಂಕ ತಿಳಿಸುತ್ತೇವೆ. ಮೊದಲು ಕನ್ನಡದಲ್ಲಿ ಚಿತ್ರವನ್ನು ಬಿಡುಗಡೆ ಮಾಡುತ್ತೇವೆ. ಆನಂತರ ಪ್ಯಾನ್ ಇಂಡಿಯಾ ಚಿತ್ರವಾಗಿ ಎಲ್ಲಾ ಭಾಷೆಗಳಲ್ಲೂ ರಿಲೀಸ್ ಮಾಡುತ್ತೇವೆ' ಎಂದರು.


ಈಗಾಗಲೇ ತುಳು ಚಿತ್ರದಲ್ಲಿ ನಟಿಸಿರುವ ನನಗೆ ಇದು ಮೂರನೇ ಚಿತ್ರ. ಸಾನ್ವಿಕ ಅವರು ಒಂದೊಳ್ಳೆ ಚಿತ್ರ ಮಾಡಿದ್ದಾರೆ. ನಾನು ಪತ್ರಕರ್ತನ ಪಾತ್ರ ಮಾಡಿದ್ದೇನೆ ಎಂದು ನಾಯಕ ಶೈನಿಂಗ್ ಸ್ಟಾರ್ ಅಜಯ್ ವರ್ಧನ್ ತಿಳಿಸಿದರು. ಚಿತ್ರದಲ್ಲಿ ನಟಿಸಿರುವ ಮಂಜುನಾಥ್, ಪ್ರತಿಮ, ಭವಾನಿ ಶಂಕರ್, ವಿಜಯ್ ಕುಮಾರ್, ರಾಮಚಂದ್ರ, ರಾಮಲಿಂಗಪ್ಪ ಹಾಗೂ ಹಿನ್ನೆಲೆ ಸಂಗೀತ ನೀಡಿರುವ ಹದಿನೆಂಟು ವಯಸ್ಸಿನ ಯುವಕ ಧ್ರುವ ದೇವರಾಯನ್, ನೃತ್ಯ ನಿರ್ದೇಶಕ ಪಾಲಾಶ್ ಮಾಸ್ಟರ್ ಸೇರಿದಂತೆ ಚಿತ್ರತಂಡದ ಸದಸ್ಯರು 'ಜಾವ ಕಾಫಿ' ಚಿತ್ರದ ಬಗ್ಗೆ ಮಾತನಾಡಿದರು. ಮೂರು ಹಾಡುಗಳಿರುವ ಈ ಚಿತ್ರಕ್ಕೆ ಶ್ರೀಧರ್ ಕರ್ಕೇರ ಸಂಗೀತ ನೀಡಿದ್ದಾರೆ.

## 'ತಾಯವ್ವ'ನ ಕೈಹಿಡಿದ ಪ್ರಣಯರಾಜ!

'ತಾಯವ್ವ' ಹೀಗೊಂದು ಹೆಸರಿನ ಚಿತ್ರ ಸುಮಾರು ಎರಡೂವರೆ ದಶಕಗಳ ಹಿಂದೆ ಕನ್ನಡದಲ್ಲಿ ತೆರೆಗೆ ಬಂದಿದ್ದು, ಹಲವರಿಗೆ ಗೊತ್ತಿರಬಹುದು. ಕನ್ನಡ ಚಿತ್ರರಂಗದ ನಟ 'ಕಿಚ್ಚ' ಸುದೀಪ್ ಮೊದಲ ಬಾರಿಗೆ ಮುಖ್ಯಭೂಮಿಕೆಯಲ್ಲಿ ಅಭಿನಯಿಸಿದ್ದ ಚಿತ್ರವದು. ಆಗ ತೆರೆಗೆ ಬಂದಿದ್ದ 'ತಾಯವ್ವ' ಚಿತ್ರದಲ್ಲಿ ಸುದೀಪ್ ಅವರೊಂದಿಗೆ ಹಿರಿಯ ನಟಿ ಉಮಾಶ್ರೀ 'ತಾಯವ್ವ'ನ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು. ಈಗ ಅದೇ 'ತಾಯವ್ವ' ಎಂಬ ಹೆಸರಿನಲ್ಲಿ, ಮತ್ತೊಂದು ಚಿತ್ರ ತೆರೆಗೆ ಬರಲು ತಯಾರಾಗುತ್ತಿದೆ. ಇನ್ನು ಈ ಬಾರಿ 'ತಾಯವ್ವ'ನಾಗಿ ಈ ಚಿತ್ರದಲ್ಲಿ ನವ ಪ್ರತಿಭೆ ಗೀತಪ್ರಿಯ ಕಾಣಿಸಿಕೊಳ್ಳುತ್ತಿದ್ದಾರೆ. ಈಗಾಗಲೇ ಸದ್ದಿಲ್ಲದೆ ?ತಾಯವ್ವ? ಚಿತ್ರದ ಬಹುತೇಕ ಕೆಲಸಗಳು ಪೂರ್ಣಗೊಂಡಿದ್ದು, ಇತ್ತೀಚೆಗೆ 'ತಾಯವ್ವ' ಚಿತ್ರದ ಟ್ರೇಲರ್ ಬಿಡುಗಡೆಯಾಯಿತು. ಹಿರಿಯ ನಟ 'ಪ್ರಣಯರಾಜ' ಶ್ರೀನಾಥ್ 'ತಾಯವ್ವ' ಸಿನಿಮಾದ ಟ್ರೇಲರ್ ಬಿಡುಗಡೆಗೊಳಿಸಿದರು. ಈ ವೇಳೆ 'ಪದ್ಮಶ್ರೀ' ಪುರಸ್ಕೃತ ವೈದ್ಯೆ ಡಾ. ಕಾಮಿನಿ ರಾವ್, ಲಹರಿ ವೇಲು, ಲಕ್ಷ್ಮೀ ನಾರಾಯಣ, ಹಿರಿಯ ನಿರ್ಮಾಪಕ ಭಾ. ಮ. ಹರೀಶ್, ಪದ್ಮಾವತಿ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು.

ಇದೇ ವೇಳೆ ಮಾತನಾಡಿದ ಹಿರಿಯ ನಟ ಶ್ರೀನಾಥ್, 'ಗೀತಪ್ರಿಯಾ ಎಂಬುದು ನನಗೆ ತುಂಬ ಇಷ್ಟವಾದ ಹೆಸರು. ಹಿರಿಯ ನಿರ್ದೇಶಕ ಗೀತಪ್ರಿಯಾ ಅವರನ್ನು ಈ ಹೆಸರು ನೆನಪಿಸುವಂತಿದೆ. 'ತಾಯವ್ವ' ಸಿನಿಮಾದಲ್ಲಿ ತಾಯವ್ವನಾಗಿ ಅಭಿನಯಿಸಿರುವವರು ಕೂಡ ಗೀತಪ್ರಿಯಾ. ಈ ಸಿನಿಮಾದ ಕಥೆ ಮತ್ತು ತುಣುಕುಗಳನ್ನು ನೋಡಿದಾಗ ಇದೊಂದು ಸಾಮಾಜಿಕ ಕಥಾಹಂದರದ ಸಿನಿಮಾ ಎಂಬುದು ಗೊತ್ತಾಗುತ್ತದೆ. ಸೂಲಗಿತ್ತಿಯ ಕಾರ್ಯ, ಹೆಣ್ಣಿನ ಮಹತ್ವ ಎರಡನ್ನೂ ಈ ಸಿನಿಮಾ ಹೇಳುತ್ತದೆ. ಈ ಸಿನಿಮಾದಲ್ಲಿ ಒಂದು ಸಂದೇಶವಿದೆ. ಇಂಥ ಸಿನಿಮಾಗಳು ಹೆಚ್ಚಾಗಿ ಬರಬೇಕು. 'ತಾಯವ್ವ' ಎಂಬ ಹೆಸರಿನಲ್ಲೇ ಒಂದು ಭಾವನಾತ್ಮಕ ಸೆಳೆತವಿದೆ. ಈ ಸಿನಿಮಾದಲ್ಲೂ ಅದೇ ಅಂಶಗಳಿರಬಹುದು ಎಂಬ ನಿರೀಕ್ಷೆಯಿದೆ. ಚಿತ್ರಕ್ಕೆ ಒಳ್ಳೆಯದಾಗಲಿ? ಎಂದು ಶುಭ ಹಾರೈಸಿದರು.

ಸಮಾರಂಭದಲ್ಲಿ ಹಾಜರಿದ್ದ ಹಿರಿಯ ವೈದ್ಯರಾದ ಡಾ. ಕಾಮಿನಿರಾವ್ ಮಾತನಾಡಿ, 'ಇದೊಂದು ಸೂಲಗಿತ್ತಿಯ ಕುರಿತಾದ ಸಿನಿಮಾ ಎಂಬುದನ್ನು ಕೇಳಿ ಸಂತೋಷವಾಯಿತು. ಒಂದು ಕಾಲದಲ್ಲಿ ಗ್ರಾಮೀಣ ಭಾಗದಲ್ಲಿ ಮಹಿಳೆಯರಿಗೆ ದೇವರ ರೂಪದಲ್ಲಿದ್ದವರು ಸೂಲಗಿತ್ತಿಯರು. ತಾವು ಮಾಡುವ ಕೆಲಸಕ್ಕೆ ಯಾವುದೇ ಲಾಭದ ನಿರೀಕ್ಷೆ ಮಅಡದೆ, ಅದೊಂದು ಸಮಾಜ ಸೇವೆ, ದೇವರ ಕೆಲಸ ಎಂಬಂತೆ ಸೂಲಗಿತ್ತಿಯರು ಕೆಲಸ ಮಾಡುತ್ತಿದ್ದರು. ಅದೆಷ್ಟೋ ಜೀವಗಳನ್ನು ಭೂಮಿಗೆ ತಂದ ಇಂಥ ಸೂಲಗಿತ್ತಿಯರನ್ನು ಇಂಥದ್ದೊಂದು ಸಿನಿಮಾದ ಮೂಲಕ ಸ್ಮರಿಸುತ್ತಿರುವುದು ನಿಜಕ್ಕೂ ಶ್ಲಾಘನೀಯ. ಈ ಸಿನಿಮಾಕ್ಕೆ ಶುಭವಾಗಲಿ. ಇಂಥದ್ದೊಂದು ಸಿನಿಮಾವನ್ನು ತೆರೆಮೇಲೆ ತರಲು ಹೊರಟಿರುವ ನಿರ್ಮಾಪಕಿ ಮತ್ತು ನಟಿ ಗೀತಪ್ರಿಯಾ ಅವರಿಗೆ 'ತಾಯವ್ವ' ಸಿನಿಮಾ ದೊಡ್ಡ ಯಶಸ್ಸು ತಂದುಕೊಡಲಿ' ಎಂದು ಹಾರೈಸಿದರು.




## 'ಜೂನಿಯರ್' ಜುಲೈ 18ರಂದು ತೆರೆಗೆ

ಜನಾರ್ದನ ರೆಡ್ಡಿ ಪುತ್ರ ಕಿರೀಟಿ ಚಿತ್ರರಂಗಕ್ಕೆ ಗ್ರ್ಯಾಂಡ್ ಎಂಟ್ರಿ ಕೊಟ್ಟಿದ್ದು ಗೊತ್ತೇ ಇದೆ. ಎಸ್.ಎಸ್ ರಾಜಮೌಳಿಯವರು ಕ್ಲ್ಯಾಪ್ ಮಾಡಿ ಕಿರೀಟಿ ಹೊಸ ಪಯಣಕ್ಕೆ ಶುಭ ಹಾರೈಸಿದ್ದರು. ಇದೀಗ ಈ ಚಿತ್ರ ಬಿಡುಗಡೆಗೆ ಸಜ್ಜಾಗಿದೆ. ಕಿರೀಟಿ ನಾಯಕನಾಗಿ ಚಿತ್ರರಂಗಕ್ಕೆ ಚೊಚ್ಚಲ ಹೆಜ್ಜೆ ಇಟ್ಟಿರುವ 'ಜೂನಿಯರ್' ಸಿನಿಮಾ ತೆರೆಗೆ ಬರುವ ದಿನಾಂಕ ನಿಗದಿಯಾಗಿದೆ. ಜುಲೈ 18ಕ್ಕೆ 'ಜೂನಿಯರ್' ಚಿತ್ರ ಬೆಳ್ಳಿಪರದೆ ಅಖಾಡಕ್ಕೆ ಇಳಿಯುತ್ತಿದೆ. ಕಿರೀಟಿ ಮೊದಲ ಸಿನಿಮಾ ಪ್ಯಾನ್ ಇಂಡಿಯಾ ಲೆವೆಲ್‌ನಲ್ಲಿ ಬಿಡುಗಡೆಯಾಗುತ್ತಿದೆ. ಕನ್ನಡ, ತೆಲುಗು, ತಮಿಳು, ಮಲಯಾಳಂ ಹಾಗೂ ಹಿಂದಿ ಭಾಷೆಯಲ್ಲಿ 'ಜೂನಿಯರ್' ಸಿನಿಮಾ ರಿಲೀಸ್ ಆಗಲಿದೆ. 'ಮಾಯಾಬಜಾರ್' ಸಿನಿಮಾ ಖ್ಯಾತಿಯ ರಾಧಾಕೃಷ್ಣ ರೆಡ್ಡಿ ನಿರ್ದೇಶನದಲ್ಲಿ ಜೂನಿಯರ್ ಸಿನಿಮಾ ತಯಾರಾಗಿದೆ. ದಕ್ಷಿಣ ಭಾರತದ ಖ್ಯಾತ ನಿರ್ಮಾಣ ಸಂಸ್ಥೆ ವಾರಾಹಿ ಫಿಲ್ಮಂ ಪ್ರೊಡಕ್ಷನ್ ಕಿರೀಟಿ ಮೊದಲ ಚಿತ್ರಕ್ಕೆ ಬಂಡವಾಳ ಹೂಡಿದ್ದು, ಬಿಗ್ ಬಜೆಟ್‌ನಲ್ಲಿ ಸಿನಿಮಾ ನಿರ್ಮಾಣ ಚಿತ್ರ ಮೂಡಿ ಬಂದಿದೆ. ಬಹುದೊಡ್ಡ ಹಾಗೂ ಸ್ಟಾರ್ ತಾರಾಗಣ ಈ ಸಿನಿಮಾದ ಮತ್ತೊಂದು ಹೈಲೈಟ್.

'ಕ್ರೇಜಿಸ್ಟಾರ್' ರವಿಚಂದ್ರನ್, ಜೆನಿಲಿಯಾ ರಿತೇಶ್ ದೇಶ್ ಮುಖ್ ಜೂನಿಯರ್ ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಕಿರೀಟಿಗೆ ಜೋಡಿಯಾಗಿ ನಟಿ ಶ್ರೀಲೀಲಾ ನಾಯಕಿಯಾಗಿ ಸಾಥ್ ಕೊಟ್ಟಿದ್ದಾರೆ. ಇನ್ನೂ ಹಲವು ತಾರೆಯರು ಈ ಚಿತ್ರದ ತಾರಾಬಳಗದಲ್ಲಿದ್ದಾರೆ.

## 'ಸೂರ್ಯ'ನ ಕೆಂಪಾನ ಗಲ್ಲದ ಹುಡುಗಿ... ಡ್ಯುಯೆಟ್ ಸಾಂಗ್ ಬಿಡುಗಡೆ



ಈಗೀಗ ಉತ್ತರ ಕರ್ನಾಟಕ ಭಾಗದ ಅನೇಕ ನಿರ್ಮಾಪಕರು ಕನ್ನಡ ಚಿತ್ರರಂಗಕ್ಕೆ ಬರುತ್ತಿದ್ದಾರೆ. ಅದೇರೀತಿ ಬೆಳಗಾವಿ ಮೂಲದ ಬಸವರಾಜ ಬೆಣ್ಣೆ ಹಾಗೂ ರವಿ ಬೆಣ್ಣೆ ಸಹೋದರರೂ ತಮ್ಮ ಕೊಡುಗೆ ನೀಡಲು ಅಣಿಯಾಗಿದ್ದಾರೆ. ನಂದಿ ಸಿನಿಮಾಸ್ ಮೂಲಕ 'ಸೂರ್ಯ' ಎಂಬ ಮಾಸ್ ಲವ್ ಸ್ಟೋರಿಯನ್ನು ನಿರ್ಮಿಸಿ, ತೆರೆಗೆ ತರುವ ಸಿದ್ದತೆ ನಡೆಸಿದ್ದಾರೆ. ಯುವಕನೊಬ್ಬ ತನ್ನ ಪ್ರೀತಿಯನ್ನು ಪಡೆದುಕೊಳ್ಳಲು ಏನೆಲ್ಲ ಹೋರಾಟ, ಸಾಹಸ ಮಾಡುತ್ತಾನೆ ಎಂಬುದನ್ನು ಈ ಚಿತ್ರದ ಮೂಲಕ ಯುವ ನಿರ್ದೇಶಕ ಸಾಗರ್ ದಾಸ್ ಅವರು ಹೇಳಹೊರಟಿದ್ದಾರೆ. ಯುವನಟ ಪ್ರಶಾಂತ್ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದು, ಹರ್ಷಿತಾ ನಾಯಕಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಚಿತ್ರದಲ್ಲಿ ಬರುವ ಉತ್ತರ ಕರ್ನಾಟಕ ಶೈಲಿಯ 'ಕೆಂಪಾನ ಗಲ್ಲದ ಹುಡುಗಿ ...' ಎಂಬ ಹಾಡಿನ ಬಿಡುಗಡೆ ಸಮಾರಂಭ ಇತ್ತೀಚಿಗೆ ಬಿಡುಗಡೆ ಆಗಿದೆ. ಹಾಡು ಹುಟ್ಟಲು, ತೆರೆಮೇಲೆ ಅಷ್ಟು ಚೆನ್ನಾಗಿ ಮೂಡಿಬರಲು ಕಾರಣ-ಕರ್ತರಾದ ಎಲ್ಲಾ ಸೃಷ್ಟಿಕರ್ತರುಗಳೂ ಸೇರಿ ಆ ಸಾಂಗ್ ನ್ನು ವೇದಿಕೆಯಲ್ಲಿ ರಿಲೀಸ್ ಮಾಡಿದ್ದು ವಿಶೇಷವಾಗಿತ್ತು.

ಸಾಹಿತಿ, ನಿರ್ದೇಶಕ ಸಾಗರ್, ಗಾಯಕರಾದ ರವೀಂದ್ರ ಸೊರಗಾವಿ, ಸ್ಫೂರ್ತಿ, ಸಂಗೀತ ನಿರ್ದೇಶಕ ಶ್ರೀಶ ಸಾಸ್ತಾ, ಕೊರಿಯಾಗ್ರಾಫರ್ ವಸಂತ್, ನಾಯಕ ಪ್ರಶಾಂತ್, ನಾಯಕಿ ಹರ್ಷಿತಾ ಜತೆ ನಿರ್ಮಾಪಕ ಸಹೋದರರು ಸೇರಿ ಈ ಹಾಡಿಗೆ ಚಾಲನೆ ನೀಡಿದರು. ಹಾಡಿನ ಪ್ರದರ್ಶನದ ನಂತರ. ಚಿತ್ರದ ಕುರಿತಂತೆ ಮಾತನಾಡಿದ ನಿರ್ಮಾಪಕ ಬಸವರಾಜ ಬೆಣ್ಣೆ 'ಈ ಸಿನಿಮಾಗೆ ನಾವೆಲ್ಲಾ ತುಂಬಾ ಕಷ್ಟಪಟ್ಟಿದ್ದೇವೆ. ಉದ್ಯಮಿಗಳಾಗಿ ಪೂನಾದಲ್ಲಿ ನೆಲೆಸಿದ್ದರೂ ಹುಟ್ಟಿಬೆಳೆದ ಕನ್ನಡ ನಾಡಿಗೆ ಏನಾದರೂ ಕೊಡುಗೆ ನೀಡಬೇಕೆಂದು, ಕನ್ನಡ ಪ್ರತಿಭೆಗಳನ್ನು ಬೆಳೆಸಬೇಕೆಂದು ಈ ಸಿನಿಮಾ ಮಾಡಿದ್ದೇವೆ' ಎಂದು ಹೇಳಿದರು.

## ಶೀಘ್ರದಲ್ಲೇ ತೆರೆಗೆ ರೊಮ್ಯಾಂಟಿಕ್ ಕಾಮಿಡಿ ಸಿನಿಮಾ 'ನಮೋ ವೆಂಕಟೇಶ'



'ನಮೋ ವೆಂಕಟೇಶ' ಹೀಗೊಂದು ಹೆಸರಿನ ಸಿನಿಮಾ ಸದ್ದಿಲ್ಲದೆ ತೆರೆಗೆ ಬರಲು ತಯಾರಾಗುತ್ತಿದೆ. ಬಹುತೇಕ ಹೊಸ ಪ್ರತಿಭೆಗಳೇ ಸೇರಿ ನಿರ್ಮಿಸುತ್ತಿರುವ 'ನಮೋ ವೆಂಕಟೇಶ' ಸಿನಿಮಾದ ಬಹುತೇಕ ಕೆಲಸಗಳು ಈಗಾಗಲೇ ಪೂರ್ಣಗೊಂಡಿದ್ದು, ಸದ್ಯ ಚಿತ್ರತಂಡ 'ನಮೋ ವೆಂಕಟೇಶ'ನ ಅಂತಿಮ ಹಂತದ ಪೋಸ್ಟ್ ಪ್ರೊಡಕ್ಷನ್ ಕೆಲಸಗಳಲ್ಲಿ ನಿರತವಾಗಿದೆ. ಚಿತ್ರತಂಡದ ಪ್ಲಾನ್ ಪ್ರಕಾರ ಎಲ್ಲವೂ ನಡೆದರೆ, ಇನ್ನು ಎರಡು-ಮೂರು ತಿಂಗಳಲ್ಲಿ ತೆರೆಮೇಲೆ 'ನಮೋ ವೆಂಕಟೇಶ'ನ ದರ್ಶವನ್ನು ಕಣ್ತುಂಬಿಕೊಳ್ಳಬಹುದು ಎಂಬುದು ಚಿತ್ರತಂಡದ ಮೂಲಗಳ ಮಾಹಿತಿ. ಅಂದಹಾಗೆ, ಈ ಸಿನಿಮಾದ ಹೆಸರು 'ನಮೋ ವೆಂಕಟೇಶ' ಅಂತಿದ್ದರೂ, ಈ ಸಿನಿಮಾಕ್ಕೂ ಪುರಾಣ, ಪುಣ್ಯಕಥೆಗಳಲ್ಲಿ ಬರುವ 'ವೆಂಕಟೇಶ'ನಿಗೂ ಯಾವುದೇ ಸಂಬಂಧವಿಲ್ಲ! ಇದು ಇಂದಿನ ಕಾಲದ ಕಥೆಯನ್ನು ಹೊಂದಿರುವ ಔಟ್ ಆಂಡ್ ಔಟ್ ಕಮರ್ಷಿಯಲ್ ಎಂಟರ್‌ಟೈನ್ಮೆಂಟ್ ಸಿನಿಮಾ. ಕಥ-ಾಹಂದರಕ್ಕೆ ಹೊಂದಾಣಿಕೆಯಾಗುತ್ತದೆ ಎಂಬ ಕಾರಣಕ್ಕೆ ಚಿತ್ರತಂಡ, ತಮ್ಮ ಚಿತ್ರಕ್ಕೆ 'ನಮೋ ವೆಂಕಟೇಶ' ಎಂದು ಹೆಸರಿಟ್ಟಿದೆ. ನವಿರಾದ ಹಾಸ್ಯದ ಜೊತೆಗೊಂದು ಪ್ರೇಮಕಥೆಯನ್ನು ಹೊತ್ತು ರೊಮ್ಯಾಂಟಿಕ್-ಕಾಮಿಡಿ ಶೈಲಿಯಲ್ಲಿ 'ನಮೋ ವೆಂಕಟೇಶ' ಸಿನಿಮಾ ತೆರೆಗೆ ಬರುತ್ತಿದೆ. ಆರುಶ್ ಪಿಕ್ಚರ್ಸ್ ಬ್ಯಾನರಿನಲ್ಲಿ ಶ್ರೀನಿವಾಸ ಗೆಜ್ಜಲಗೆರೆ ಮೊದಲ ಬಾರಿಗೆ ನಿರ್ಮಿಸುತ್ತಿರುವ 'ನಮೋ ವೆಂಕಟೇಶ' ಸಿನಿಮಾಕ್ಕೆ ಕಿರುತೆರೆ ಮಾಂತ್ರಿಕ ಟಿ. ಎನ್. ಸೀತಾರಾಮ್ ಅವರ ಗರಡಿಯಲ್ಲಿ ಪಳಗಿದ, ಮೈಸೂರು ಮೂಲದ ಯುವ ಪ್ರತಿಭೆ *ವಿಜಯ್ ಭಾರದ್ವಾಜ್* ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ. ಜೊತೆಗೆ ತೆರೆಮೇಲೆ ನಾಯಕ ನಟನಾಗಿಯೂ ಕಾಣಿಸಿಕೊಂಡಿದ್ದಾರೆ. ಈಗಾಗಲೇ ಕಿರುತೆರೆಯ 'ಗಟ್ಟಿಮೇಳ' ಧಾರಾವಾಹಿಯ ಆಧ್ಯ ಪಾತ್ರದಲ್ಲಿ ಹಾಗೂ ಹಿರಿತೆರೆಯ ಕೆಲ ಸಿನಿಮಾಗಳಲ್ಲಿ ಅಭಿನಯಿಸಿ, ನಟಿಯಾಗಿ ಗುರುತಿಸಿಕೊಂಡಿರುವ ಅನ್ವಿತಾ ಸಾಗರ್ (ಪಾರ್ವತಿ) 'ನಮೋ ವೆಂಕಟೇಶ'ದಲ್ಲಿ ನಾಯಕಿಯಾಗಿ ಅಭಿನಯಿಸಿದ್ದಾರೆ. ಉಳಿದಂತೆ ಶ್ಯಾಮ್ ಸುಂದರ್, ನಾಗರಾಜ ರಾವ್, ರವಿಕುಮಾರ್, ದೀಪಾ, ಮಂಜುನಾಥ್ ಹೆಗ್ಡೆ, ಸುಧಾ ಪ್ರಸನ್ನ ಮೊದಲಾದ ಕಲಾವಿದರು 'ನಮೋ ವೆಂಕಟೇಶ' ಸಿನಿಮಾದ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ.

ನಗರವಾಣಿ ದಾವಣಗೆರೆ
ಮೇ 16, 2025
ಶುಕ್ರವಾರ,
ಪುಟ–3
ಚುಟುಕು ಕಳುಹಿಸುವ ವಿಭಾಗ
9740137083
ಜಾಹೀರಾತಿಗಾಗಿ ಸಂಪರ್ಕಿಸಿ
08192–254186

## ಬೆಳ್ಳಂಬೆಳಿಗ್ಗೆ 55 ರೌಡಿಶೀಟರ್‌ಗಳ...

(1ನೇ ಪುಟದಿಂದ) ಒಟ್ಟು 55 ರೌಡಿಶೀಟರ್ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಈ ಸಂದರ್ಭದಲ್ಲಿ ಕಾನೂನು ಬಾಹಿರವಾದ ಯಾವುದೇ ವಸ್ತುಗಳು ಕಂಡು ಬಂದಿಲ್ಲ. ಕಾನೂನು ಬಾಹಿರ, ಕಾನೂನು ಸುವ್ಯವಸ್ಥೆಗೆ ಧಕ್ಕೆ ಬರುವಂತಹ ಕೃತ್ಯಗಳಲ್ಲಿ ತೊಡಗಬಾರದು ಎಂದು ರೌಡಿಶೀಟರ್‌ಗಳಿಗೆ ಪೊಲೀಸರು ಎಚ್ಚರಿಸಿದ್ದಾರೆ ಎಂದು ಜಿಲ್ಲಾ ಪೊಲೀಸ್ ಇಲಾಖೆ ತಿಳಿಸಿದೆ. ತಪಾಸಣೆ ವೇಳೆ ರೌಡಿ ಶೀಟರ್‌ಗಳ ಮನೆಗಳಲ್ಲಿ ಯಾವುದೇ ನಿಷೇಧಿತ ವಸ್ತುಗಳು ದೊರೆತಿಲ್ಲ. ಇನ್ನು ಮುಂದೆ ಇದೇ ರೀತಿಯಲ್ಲಿ ಪೊಲೀಸರ ದಿಢೀರ್ ದಾಳಿ ಮುಂದುವರಿಯಲಿದೆ. ಈಗಾಗಲೇ 645 ರೌಡಿಶೀಟರ್‌ಗಳಿಂದ ಮುಚ್ಚಳಿಕೆ ಪತ್ರಗಳನ್ನು ಪಡೆಯಲಾಗಿದ್ದು, ಸಾರ್ವಜನಿಕರು ರೌಡಿಶೀಟರ್‌ಗಳಿಂದ ತೊಂದರೆಗೊಳಗಾಗಿದ್ದರೆ ಧೈರ್ಯವಾಗಿ ನೇರವಾಗಿ ಬಂದು ತಮಗೆ ದೂರು ನೀಡಬಹುದು. ದೂರು ನೀಡಿದವರಿಗೆ ಕಾನೂನು ರಕ್ಷಣೆ ನೀಡಲಾಗುವುದು ಎಂದು ಎಸ್ಪಿ ಉಮಾ ಪ್ರಶಾಂತ್ ತಿಳಿಸಿದ್ದಾರೆ.

**ಕಥೆ-ಕವನ, ಚುಟುಕು, ಮಕ್ಕಳು ಬಿಡಿಸಿದ ಚಿತ್ರಗಳನ್ನು ಪ್ರಕಟಿಸುವ ವಿಭಾಗ**
**9740137083**

### ದಿನಕ್ಕೊಂದು ಚುಟುಕು

ಭಾವಗಳ ಬಿತ್ತರಿಸೆ ಬೇಡವೆನ್ನದಿರು
ನಾವೆಗಳ ಕಟ್ಟಿದರೆ ಪಯಣಿಸನೆನ್ನದಿರು
ಹವನವ ಎರೆದರೆ ದೂರ ದೂಡದಿರು
ಕವಲು ದಾರಿಯನೆಂದೂ ಹುಡುಕದಿರು–ಮರುಳೆ

– ಡಾ. ಮಮು

### ದಿನಕ್ಕೊಂದು ನುಡಿ ಮುತ್ತು

ಹೇಳದೇ ಉಳಿದ ಮಾತುಗಳು,
ಹೇಳಬೇಕೆಂದರೂ ಕೇಳದ
ಮನಸುಗಳಿಗೆ ಕೇಳಿಸಿ,
ಅನರ್ಥವಾಗಿಸೋದಕ್ಕಿಂತ
ಮನದಾಳದಲ್ಲಿ
ಉಳಿಯೋದೇ ಶ್ರೇಯಸ್ಕರ!
ಪ್ರತಿಸ್ಪಂದನೆ ಈಗಿನ
ಅವಶ್ಯಕತೆಗಳಲ್ಲಿ ಅತೀ ಪ್ರಾಮುಖ್ಯ!!

– ಮಂಜುಳಾ ಪ್ರಸಾದ್ ದಾವಣಗೆರೆ

# ನಿರಂತರ ಅಧ್ಯಯನಶೀಲತೆ, ಪರಿಶ್ರಮ ಸಾಧನೆಗೆ ಪೂರಕ: ನ್ಯಾ.ಎಚ್.ಕೆ.ರೇಷ್ಮಾ



ದಾ.ನಗರವಾಣಿ ಸುದ್ದಿ,

ಜಗಳೂರು,ಮೇ.15: ನಿರಂತರ ಅಧ್ಯಯನ ಶೀಲತೆ ಮತ್ತು ಪರಿಶ್ರಮ ಸಾಧನೆಗೆ ಪೂರಕ ಎಂದು ಸಿವಿಲ್ ನ್ಯಾಯಾಲಯದ ಹಿರಿಯ ಶ್ರೇಣಿ ನ್ಯಾಯಾಧೀಶೆ ಎಚ್. ಕೆ. ರೇಷ್ಮಾ ಅಭಿಪ್ರಾಯ ವ್ಯಕ್ತಪಡಿಸಿದರು.

ಗುರುವಾರ ಪಟ್ಟಣದ ಜೆಎಂಎಫ್ ಸಿ ನ್ಯಾಯಾಲಯದ ವಕೀಲರ ಸಭಾಂಗಣದಲ್ಲಿ ತಾಲೂಕು ವಕೀಲರ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ನಾನು ತಾಲೂಕಿನಲ್ಲಿ ಒಂದು ವರ್ಷಗಳ ಕಾಲ ಸೇವೆಗೈದಿದ್ದು, ಕೋರ್ಟ್‌ನಲ್ಲಿ ಸಹೋದ್ಯೋಗಿಗಳ ಹಾಗೂ ನ್ಯಾಯವಾದಿಗಳ ಸಹಕಾರಕ್ಕೆ ಚಿರ ಋಣಿಯಾಗಿರುವೆ. ಯಾವುದೇ ಕ್ಷೇತ್ರದಲ್ಲಿ ಸಾಧನೆಗೆ ನಿರಂತರ ಅಧ್ಯಯನ, ಪ್ರಾಮಾಣಿಕತೆ, ವೃತ್ತಿಗೌರವ ಮುಖ್ಯ ಎಂದು ಹೇಳಿದರು.

ವಿಲ್ ಮತ್ತು ಜೆಎಂಎಫ್ ಸಿ ನ್ಯಾಯಾಧೀಶ ಆರ್. ಚೇತನ್ ಮಾತನಾಡಿ, ಕೆಳ ದರ್ಜೆಯ ಸಹೋದ್ಯೋಗಿಗಳಿಗೆ ಹಿರಿಯ ಶ್ರೇಣಿ ನ್ಯಾಯಾಧೀಶರಾಗಿದ್ದ ಎಚ್.ಕೆ.ರೇಷ್ಮಾ ಅವರ ಸದಾ ಮಾರ್ಗದರ್ಶನದಿಂದ ಹಾಗೂ ಸಾರ್ವಜನಿಕರಿಗೆ ಕಾನೂನು ಅರಿವು ಮೂಡಿಸಿದ ಕಾರಣ ತಾಲೂಕಿನಲ್ಲಿ ಪ್ರಥಮ ಲೋಕ ಅದಾಲತ್ ನಲ್ಲಿ 300 ಮತ್ತು 5 ನೇ ಲೋಕ ಅದಾಲತ್ ನಲ್ಲಿ 900 ಪ್ರಕರಣಗಳ ವರೆಗೆ ರಾಜಿಸಂಧಾನದೊಂದಿಗೆ ಇತ್ಯರ್ಥಕ್ಕೆ ಸಾಕ್ಷಿಯಾಯಿತು ಎಂದು ತಿಳಿಸಿದರು.

ವಕೀಲರ ಸಂಘದ ತಾಲೂಕು ಘಟಕದ ಅಧ್ಯಕ್ಷ ಮರೇನಹಳ್ಳಿ ಟಿ. ಬಸವರಾಜ್ ಮಾತನಾಡಿ, ಹಿರಿಯ ಶ್ರೇಣಿ ನ್ಯಾಯಾಧೀಶರಾದ ರೇಷ್ಮಾ ಅವರು ತಾಲೂಕಿನಲ್ಲಿ ವಕೀಲ ಸಂಘದ ನಿರ್ವಹಣೆ ಕುರಿತು ಸಲಹೆ ನೀಡುತ್ತಿದ್ದರು.ಅವರು ನಿಷ್ಠೆ ಪ್ರಮಾಣಿಕತೆ ಹಾಗೂ ತಮ್ಮ ಸ್ಥಾನದಲ್ಲಿ ಕುಳಿತಾಗ ಗಂಭೀರತೆಯಿಂದ ನಡೆದುಕೊಂಡು ಯಾವುದೇ ಕ್ಲಿಷ್ಟಕರ ಪ್ರಕರಣಗಳನ್ನು ಇತ್ಯರ್ಥಪಡಿಸುತ್ತಿದ್ದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸರ್ಕಾರಿ ಸಹಾಯಕ ಅಭಿಯೋಜಕ ಮಂಜುನಾಥ್, ವಕೀಲರ ಸಂಘದ ಪದಾಧಿಕಾರಿಗಳಾದ ಎ.ಕೆ.ಪರುಶರಾಮ್, ಎಂ.ಸಿ.ತಿಪ್ಪೇಸ್ವಾಮಿ, ಕೆ.ಎಂ. ಬಸವರಾಜಪ್ಪ, ಹಿರಿಯ ವಕೀಲ ವೈ.ಹನುಮಂತಪ್ಪ, ವಕೀಲ ಸಂಘದ ಮಾಜಿ ಅಧ್ಯಕ್ಷ ಬಸವರಾಜ್, ವಕೀಲರಾದ ತಿಪ್ಪೇಸ್ವಾಮಿ , ಡಿ.ವಿ. ನಾಗಪ್ಪ, ಮಹಾಂತೇಶ್, ಕರಿಬಸಯ್ಯ, ತಿಪ್ಪೇಸ್ವಾಮಿ, ಕಲ್ಲೇಶ್, ನಾಗೇಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವವಿದ್ಯಾಲಯ ಸುವರ್ಣ ಮಹೋತ್ಸವ ಆಚರಣೆಗೆ ಸಿದ್ಧತೆ



ದಾ ನಗರವಾಣಿ ಸುದ್ದಿ

ದಾವಣಗೆರೆ, ಮೇ 15: ಅಧ್ಯಾತ್ಮಿಕ ಸೇವಾ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ದಾವಣಗೆರೆ ಶಾಖೆಯು 50ನೇ ವರ್ಷಾಚರಣೆಯಲ್ಲಿದ್ದು, ಸುವರ್ಣ ಮಹೋತ್ಸವ ಆಚರಣೆಗೆ ಬರದ ಸಿದ್ಧತೆ ನಡೆಸಿದೆ.

ಇದೇ ದಿನಾಂಕ 25ರ ಭಾನುವಾರ ಬೆಳಿಗ್ಗೆ 10 ಗಂಟೆಗೆ ನಗರದ ಶ್ರೀ ಡಿ. ದೇವರಾಜ ಅರಸು ಬಡಾವಣೆ 'ಬಿ' ಬ್ಲಾಕ್‌ನಲ್ಲಿರುವ ಕ್ರೀಡಾಂಗಣದಲ್ಲಿ ಸುವರ್ಣ ಮಹೋತ್ಸವ ಕಾರ್ಯಕ್ರಮ ಏರ್ಪಾಡಾಗಿದೆ.

ಸುವರ್ಣ ಮಹೋತ್ಸವದ ಸವಿನೆನಪಿಗಾಗಿ ರಚಿತಗೊಂಡಿರುವ ಲಾಂಛನವನ್ನು ಹಿರಿಯ ಶಾಸಕ ಡಾ. ಶಾಮನೂರು ಶಿವಶಂಕರಪ್ಪ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರುಗಳು ತಮ್ಮ ನಿವಾಸ 'ಶಿವ–ಪಾರ್ವತಿ'ಯಲ್ಲಿ ಅನಾವರಣಗೊಳಿಸಿ, ಶುಭ ಹಾರೈಸಿದರು.

ಬ್ರಹ್ಮಾಕುಮಾರೀಸ್ ಸಂಸ್ಥೆಯು ಸ್ಥಳೀಯ ಶ್ರೀ ಡಿ. ದೇವರಾಜ ಅರಸು ಬಡಾವಣೆ 'ಬಿ' ಬ್ಲಾಕ್‌ನಲ್ಲಿ ನಿರ್ಮಿಸಿರುವ ಅಧ್ಯಾತ್ಮಿಕ ಚಿತ್ರ ಸಂಗ್ರಹಾಲಯವನ್ನೊಳಗೊಂಡಿರುವ ಆಕರ್ಷಕವಾದ ಶಿವಲಿಂಗ ಕಟ್ಟಡವು ಕೈಬೀಸಿ ಕರೆಯುವಂತಿದ್ದು, ಇದೇ ಶಿವಲಿಂಗವನ್ನು ಲಾಂಛನಕ್ಕೆ ಬಳಸಿಕೊಳ್ಳಲಾಗಿದೆ.

ಈಶ್ವರೀಯ ವಿಶ್ವವಿದ್ಯಾಲಯದ ಪ್ರಧಾನ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಾಕುಮಾರಿ ಲೀಲಾಜಿ ಅವರು, ಬ್ರಹ್ಮಾಕುಮಾರೀಸ್ ಸಂಸ್ಥೆಯ ಸ್ಥಾಪನೆ ಮತ್ತು ಸಮಾಜಕ್ಕೆ ಸಲ್ಲಿಸುತ್ತಿರುವ ಸೇವೆಯನ್ನು ಎಸ್ಸೆಸ್ ಮತ್ತು ಎಸ್ಸೆಸ್ಸೆಂ ಅವರುಗಳಿಗೆ ವಿವರಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ. ವಾಮದೇವಪ್ಪ, ರಾಜಯೋಗ ಶಿಕ್ಷಕರಾದ ಬ್ರಹ್ಮಾಕುಮಾರಿ ಶೋಭಾ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**DAVANGERE SUGAR COMPANY LIMITED**
73/1, POST BOX NO.312, SHAMANUR ROAD, DAVANGERE., SHAMANUR ROAD, DAVANGERE., Karnataka, India, 577004 - CIN:L37100KA1970PLC001949 - email:cs@davangeresugars.com

**Extract of audited financial results for the year ended 31 March 2025**
(Amount INR in Lakhs (except per share data)

| Sr. No | Particulars | Standalone | | |
|---|---|---|---|---|
| | | Quarter Ended | Quarter Ended | Year ended |
| | | 31-Mar-25 | 31-Mar-24 | 31-Mar-25 |
| | | Audited | Audited | Audited |
| 1 | Total income from operations | 5,690.69 | 6,356.96 | 21,498.53 |
| 2 | "Net Profit/(Loss) for the period (before Tax, Exceptional and/ or Extraordinary items#)" | 224.71 | 459.75 | 1,285.90 |
| 3 | "Net Profit / (Loss) for the period before tax (after Exceptional and/ or Extraordinary items#)" | 224.71 | 459.75 | 1,285.90 |
| 4 | "Net Profit / (Loss) for the period after tax (after Exceptional and/or Extraordinary items#)" | 183.65 | 455.25 | 1,083.71 |
| 5 | "Total Comprehensive Income for the period [Comprising Profit / (Loss) for the period (after tax) and Other Comprehensive Income (after tax)]" | - | - | - |
| 6 | Equity Share Capital | **9,408.45** | **9,408.45** | **9,408.45** |
| 7 | "Reserves (excluding Revaluation Reserve) as shown in the Audited Balance Sheet of the previous year." | - | - | - |
| 8 | "Earnings Per Share (of Rs. 1/- each) (for continuing and discontinued operations) - 1.Basic: 2. Diluted:" | "0.20 0.20" | "0.48 0.48" | "1.16 1.16" |

**Note:** The above is an extract of the detailed format of audited financial results filed with the Stock Exchanges under Regulation 33 of the SEBI (Listing and Other Disclosure Requirements) Regulations, 2015. The full format for three months and year ended 31 March 2025 are available on the websites of the Stock Exchange, https:// www.nseindia.com, https:// www.bseindia.com) and also on Company's website (URL: https://davangeresugar.com/wp-content/uploads/2025/05/Q4-1.pdf) and can be accessed through the given QR code.

Place: Davangere
Date : 14 May 2025

S.S GANESH, Managing Director
DIN: 00451383

# ಹೋ. ಚಿ. ಬೋರಯ್ಯ ಪ್ರಥಮ ದರ್ಜೆ ಕಾಲೇಜಿಗೆ ಉತ್ತಮ ಫಲಿತಾಂಶ







ದಾ.ನಗರವಾಣಿ ಸುದ್ದಿ,

ಜಗಳೂರು, ಮೇ.15; ಪಟ್ಟಣದ ಹೋ.ಚಿ. ಬೋರಯ್ಯ ಸ್ಮಾರಕ ಎಸ್‌ಸಿ/ಎಸ್ ಟಿ ಪ್ರಥಮ ದರ್ಜೆ ಕಾಲೇಜಿನ ಪದವಿ ಫಲಿತಾಂಶದಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಗೈದಿದ್ದಾರೆ.

ಪ್ರಥಮ ವರ್ಷದ ಬಿ.ಎ ಅರ್ಥಶಾಸ್ತ್ರ ವಿಭಾಗದಲ್ಲಿ ಅಪ್ಪು ಶೇ.94, ಅಂತಿಮ ವರ್ಷದ ಬಿಎ ಅರ್ಥಶಾಸ್ತ್ರ ವಿಭಾಗದಲ್ಲಿ ಮಲ್ಲೇಶ್ ಶೇ. 93, ಅಂತಿಮ ವರ್ಷದ ಬಿಎ ಇತಿಹಾಸ ವಿಭಾಗದಲ್ಲಿ ಮಧುಲೇಖಾ ಶೇ.91, ಅಂಕಗಳನ್ನು ಗಳಿಸಿದ್ದು ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷರು ಹಾಗೂ ಸದಸ್ಯರುಗಳು, ಪ್ರಾಂಶುಪಾಲ ಮಧು, ಉಪನ್ಯಾಸಕರಾದ ಡಾ.ಸುರೇಶ್, ಪ್ರಸನ್ನಕುಮಾರ್, ನಾಗರಾಜ್ ಸೇರಿದಂತೆ ಅಭಿನಂದನೆ ಸಲ್ಲಿಸಿದ್ದಾರೆ.

## ಸ್ಮಾರ್ಟ್ ಕಾರ್ಡ್, ಡಿಜಿಟಲ್ ಮೀಟರ್...

(1ನೇ ಪುಟದಿಂದ) ವಿದ್ಯುತ್ ಸಂಪರ್ಕಕ್ಕೆ ರೈತರ ಆಧಾರ್ ಜೋಡಣೆ ಮಾಡುವುದನ್ನು ಕೂಡಲೇ ಸರ್ಕಾರ ನಿಲ್ಲಿಸಬೇಕು. ಆಧಾರ್ ಕಾರ್ಡ್ ಜೋಡಣೆ ಮಾಡುವುದರಿಂದ ರೈತರ ಬದುಕು ದುಸ್ತರವಾಗಲಿದೆ. ಸರ್ಕಾರ ರೈತರಿಗೆ ಟಿಸಿಗಳನ್ನು ಮಾತ್ರ ನೀಡುತ್ತಿದ್ದು, ಕಂಬ, ವೈರ್‌ಗಳಿಗೆ ರೈತರೇ ವೆಚ್ಚವನ್ನು ಭರಿಸುತ್ತಿದ್ದಾರೆ. ಆದ್ದರಿಂದ ಸರ್ಕಾರವೇ ಉಚಿತವಾಗಿ ನೀಡಬೇಕು ಎಂದು ಆಗ್ರಹಿಸಿದರು.

ಕೆಲವು ಭಾಗದಲ್ಲಿ ಮಾತ್ರ ವಿದ್ಯುತ್ ನೀಡಲಾಗುತ್ತಿದ್ದು, ಸಂಜೆ 6 ಗಂಟೆಯಿಂದ ಬೆಳಗ್ಗೆ 6 ಗಂಟೆಯವರೆಗೆ ಸಮರ್ಪಕ ವಿದ್ಯುತ್ ನೀಡಬೇಕು. ಇದರಿಂದ ಜಮೀನುಗಳಲ್ಲೇ ವಾಸವಿರುವ ರೈತರಿಗೆ, ವಿದ್ಯಾರ್ಥಿಗಳಿಗೆ, ಹೈನುಗಾರಿಕೆ ಮಾಡುವವರಿಗೆ ಅನುಕೂಲವಾಗಲಿದೆ ಎಂದ ಅವರು, ಬೆಸ್ಕಾಂ ಲೈನ್‌ಗಳಲ್ಲಿ 15 ವರ್ಷಗಳಿಂದ ಗಿಡ ಗಂಟೆಗಳು ಬೆಳೆದಿದ್ದು, ವಿದ್ಯುತ್ ತಾಗಿ ವಿದ್ಯುತ್ ವೈರ್‌ಗಳು ಸುಟ್ಟು ಹೋಗುತ್ತಿವೆ. ಅಷ್ಟೇ ಅಲ್ಲದೇ ಕೃಷಿ ಪಂಪ್‌ಸೆಟ್, ಟಿಸಿ, ಮೋಟಾರ್, ಕೇಬಲ್‌ಗಳು ಸುಟ್ಟು ಹೋಗಿ ರೈತರಿಗೆ ಲಕ್ಷಾಂತರ ನಷ್ಟ ಉಂಟಾಗಿದೆ. ಆದ್ದರಿಂದ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು, ಜಿಲ್ಲೆಯ ಶಾಸಕರು, ಜಿಲ್ಲಾಧಿಕಾರಿಗಳು ತಕ್ಷಣವೇ ಬೆಸ್ಕಾಂ ಅಧಿಕಾರಿಗಳ ಸಭೆ ಕರೆದು, ಸಮರ್ಪಕ ವಿದ್ಯುತ್ ಪೂರೈಸುವಂತೆ, ರೈತರಿಗೆ ಸ್ಪಂದಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಈ ಬಗ್ಗೆ ಉದಾಸೀನ ಮಾಡಿದರೆ ಶೀಘ್ರವೇ ಸಚಿವರು, ಸಂಸದರು, ಶಾಸಕರ ನಿವಾಸಿಗಳ ಮುಂದೆ ರೈತ ಸಂಘ ಮತ್ತು ಹಸಿರು ಸೇನೆ ಜಿಲ್ಲಾ ಘಟಕದ ನೇತೃತ್ವದಲ್ಲಿ ತೀವ್ರ ಸ್ವರೂಪದ ಹೋರಾಟ ನಡೆಸಬೇಕಾದೀತು ಎಂದು ಗುಮ್ಮನೂರು ಬಸವರಾಜ ಎಚ್ಚರಿಸಿದರು.

ಸಂಘದ ಮುಖಂಡರಾದ ಹರಿಹರ ತಾಲೂಕು ಅಧ್ಯಕ್ಷ ವಟಿಗನಹಳ್ಳಿ ಸುನಿಲ, ಚಿಕ್ಕಬೂದಿಹಾಳ ಭಗತ್ ಸಿಂಹ, ಕೆಂಚಮ್ಮನಹಳ್ಳಿ ಹನುಮಂತಪ್ಪ, ಮಾಯಕೊಂಡ ಅಧ್ಯಕ್ಷ ಚಿಕ್ಕತೊಗಲೇರಿ ಮಲ್ಲಿಕಪ್ಪ, ಕೋಲ್ಕುಂಟೆ ಉಚ್ಚೆಂಗೆಪ್ಪ, ಕುರ್ಕಿ ಹನುಮಂತಪ್ಪ, ಕೆಂಚಮ್ಮನಹಳ್ಳಿ ಹನುಮಂತಪ್ಪ, ಜಗಳೂರು ಅಧ್ಯಕ್ಷ ಭರಮಸಮುದ್ರ ಕುಮಾರ, ದೊಣೆಹಳ್ಳಿ ಲೋಕಣ್ಣ, ನೀರ್ಥಡಿ ಭೀಮಣ್ಣ, ಹುಚ್ಚವ್ವನಹಳ್ಳಿ ಸಿದ್ದಪ್ಪ, ಸೂರಪ್ಪ ತಿಮ್ಮನಹಳ್ಳಿ, ದಾದಾಪೀರ್, ಕೃಷ್ಣಮೂರ್ತಿ, ವೀರ, ಪ್ರಕಾಶ, ತಿಪ್ಪೇಸ್ವಾಮಿ, ರಂಗಪ್ಪ, ಶಿವಣ್ಣ, ಪಿ.ಪಿ.ರಂಗಪ್ಪ, ಮನೋಜ, ರಂಗಮ್ಮ, ಬಸಮ್ಮ, ಎನ್.ಓ. ರಾಜಪ್ಪ, ನೀರ್ಥಡಿ ತಿಪ್ಪೇಶ, ಚನ್ನಬಸಪ್ಪ, ಪ್ರೇಮ, ರತ್ನಮ್ಮ, ಮಧು ಇತರರು ಇದ್ದರು.

## ಮೇ.20 ಕ್ಕೆ ಕಾಂಗ್ರೆಸ್ ಸಂಭ್ರಮ–ಈಶ್ವರ್...

(1ನೇ ಪುಟದಿಂದ)ಪ್ರತಿಯೊಬ್ಬ ಸಚಿವರು ಶ್ರಮವಹಿಸಿ ಕೆಲಸ ಮಾಡಿದ್ದೇವೆ. ಅರಣ್ಯ ಇಲಾಖೆ ಕೂಡ ಸಾಕಷ್ಟು ಸಾಧನೆ ಮಾಡಿದೆ ಎಂದು ಹೇಳಿದರು.

2013–18 ರಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿದ್ದಾಗ ಕಂದಾಯ ಗ್ರಾಮ ಮಂಜೂರು ಮಾಡುವ ಪ್ರಯತ್ನ ನಡೆಯಿತು. ಸರ್ಕಾರಿ ಸೌಲಭ್ಯ ಇಲ್ಲದೇ ಬದುಕುವ ಅಲೆಮಾರಿ, ಅರೆ ಅಲೆಮಾರಿ, ಬುಡಕಟ್ಟು ಜನರೂ ಸೇರಿದಂತೆ ಗೊಲ್ಲರಹಟ್ಟಿ, ತಾಂಡ ಸೇರಿ ಎಲ್ಲ ಕಡೆ 3500 ಗ್ರಾಮಗಳಿಗೆ ಕಂದಾಯ ಗ್ರಾಮದ ಮಾನ್ಯತೆ ನೀಡಲಾಗಿದೆ. ಇವರಿಗೆ ಡಿಜಿಟಲ್ ಹಕ್ಕುಪತ್ರ ನೀಡಲಾಗುತ್ತಿದೆ. ಇದು ರಾಜ್ಯದಲ್ಲಿ ಮೊದಲ ಬಾರಿಗೆ ನಡೆಯುತ್ತಿದೆ ಎಂದರು.

ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಎಚ್. ಮಂಜಪ್ಪ ಮಾತನಾಡಿ, ರಾಜ್ಯ ಸರ್ಕಾರ ನುಡಿದಂತೆ ನಡೆದಿದೆ. ಸಿದ್ದರಾಮಯ್ಯ ನೇತೃತ್ವದಲ್ಲಿ ಸರ್ಕಾರ–ಕ್ಕೆ ಎರಡು ವರ್ಷ ತುಂಬಿದ್ದು, ಸರ್ಕಾರದ ಸಾಧನಾ ಸಮಾವೇಶದಲ್ಲಿ ಹೆಚ್ಚಿನ ಜನರು ಪಾಲ್ಗೊಳ್ಳಲು ಸಭೆಗಳನ್ನು ಮಾಡಲಾಗುತ್ತಿದೆ. ಸರ್ಕಾರದ ಫಲಾನುಭವಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕರೆದೊಯ್ದು ಸರ್ಕಾರಕ್ಕೆ ಇನ್ನಷ್ಟು ಬಲ ತುಂಬೋಣ ಎಂದು ಹೇಳಿದರು.

ಜನ ಸಂಘಟನೆಗೆ ಸಚಿವರು ಮತ್ತು ಶಾಸಕರಿಗೆ ಉಸ್ತುವಾರಿ ನೀಡಲಾಗಿದೆ. ಸಚಿವರಾದ ಎಂ.ಸಿ.ಸುಧಾಕರ್, ಲಕ್ಷ್ಮಿ ಹೆಬ್ಬಾಳ್ಕರ್ ಸೇರಿ ಅನೇಕರು ಜಿಲ್ಲೆಗೆ ಭೇಟಿ ನೀಡಿ ಜನರನ್ನು ಸಮಾವೇಶಕ್ಕೆ ಕರೆದೊಯ್ಯುವ ಕೆಲಸ ಮಾಡಲಿದ್ದಾರೆ ಎಂದು ಹೇಳಿದರು.

ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ, ಯುವ ಘಟಕದ ಅಧ್ಯಕ್ಷ ವರುಣ್, ನಗರಸಭೆ ಮಾಜಿ ಸದಸ್ಯ ಎಸ್. ಮಲ್ಲಿಕಾರ್ಜುನ್, ಕೆ.ಜಿ.ಶಿವಕುಮಾರ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಅನಿತಾ ಬಾಯಿ, ಅಯೂಬ್ ಪೈಲ್ವಾನ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬಲೂಚ್ ಆರ್ಮಿಯಿಂದ ಮತ್ತೊಂದು...

(1ನೇ ಪುಟದಿಂದ)

ವಕ್ತಾರ ಜೀಯಂಡ್ ಬಲೂಚ್, ಬಿಎಲ್‌ಎ ಸ್ವಾತಂತ್ರ್ಯ ಹೋರಾಟಗಾರರು ಕ್ವೆಟ್ಟಾ ಮತ್ತು ಮಸ್ತಂಗ್‌ನಲ್ಲಿ ಪಾಕಿಸ್ತಾನಿ ಸೇನೆ ಮತ್ತು ಅದರ ವಿಜಯೋತ್ಸವವನ್ನು ಗುರಿಯಾಗಿಸಿಕೊಂಡಿದ್ದಾರೆ. ಇಂದು, ಸ್ವಾತಂತ್ರ್ಯ ಹೋರಾಟ ಗಾರರು ಕ್ವೆಟ್ಟಾದಲ್ಲಿ ಆಕ್ರಮಿತ ಪಾಕಿಸ್ತಾನಿ ಸೇನೆಯ ಆಶ್ರಯದಲ್ಲಿ ಆಯೋಜಿಸಲಾದ "ವಿಕ್ಟರಿ ಸೆಲೆಬ್ರೇಷನ್ಸ್" ಎಂದು ಕರೆಯಲ್ಪಡುವ ರ್ಯಾಲಿಯನ್ನು ಗುರಿಯಾಗಿಸಿಕೊಂಡು ಮುನೀರ್ ಮೆಂಗಲ್ ರಸ್ತೆಯಲ್ಲಿ ಗ್ರೆನೇಡ್ ದಾಳಿ ನಡೆಸಿದರು. ಈ ರ್ಯಾಲಿಯ ನೇತೃತ್ವವನ್ನು ಎಂಪಿಎ ಅಲಿ ಮದದ್ ಜಟ್ಟಕ್ ವಹಿಸಿದ್ದರು. ರ್ಯಾಲಿಗೆ ಮುಂಚಿತವಾಗಿ ಸ್ವಾತಂತ್ರ್ಯ ಹೋರಾಟಗಾರರು (ನೇ ಪುಟಕ್ಕೆ) ಸಶಸ್ತ್ರ ಡೆತ್ ಸ್ಕ್ವಾಡ್ ಏಜೆಂಟ್‌ಗಳನ್ನು ಗುರಿಯಾಗಿಸಿಕೊಂಡಿತ್ತು. ದಾಳಿಯ ಪರಿಣಾಮವಾಗಿ 1 ಡೆತ್ ಸ್ಕ್ವಾಡ್ ಏಜೆಂಟ್ ಹತ್ಯೆಯಾಗಿದ್ದು 12 ಜನರು ಗಾಯಗೊಂಡಿದ್ದಾರೆ.

ಬಿಎಲ್‌ಎ ಬಲೂಚಿಸ್ತಾನ್ ಸರ್ಕಾರ ಮತ್ತು ಆಕ್ರಮಿತ ರಾಜ್ಯದ ಆಶ್ರಯದಲ್ಲಿ ಅದರ ಆಚರಣೆಯನ್ನು ಗುರಿಯಾಗಿಸಿಕೊಂಡಿತು. ಬಲೂಚ್ ವಿಮೋಚನಾ ಚಳುವಳಿ ಸಾರ್ವಜನಿಕ ಬೆಂಬಲದೊಂದಿಗೆ ಬಲವಾದ ಸ್ವರೂಪವನ್ನು ಪಡೆದು–ಕೊಂಡಿದೆ ಎಂದು ಪ್ರಕಟಣೆಯಲ್ಲಿ ಸೇರಿಸಲಾಗಿದೆ.

# ಬೆಂಬಲ ಬೆಲೆ ಕಾಯ್ದೆ ಜಾರಿಗೆ ಬರದಿದ್ದರೆ ದಾವಣಗೆರೆ ಬಂದ್



ದಾ ನಗರವಾಣಿ ಸುದ್ದಿ

ಹರಿಹರ: ಸುಗ್ರೀವಾಜ್ಞೆ ಮೂಲಕ ಕನಿಷ್ಟ ಬೆಂಬಲ ಬೆಲೆ ಕಾಯ್ದೆಯನ್ನು ರಾಜ್ಯ ಸರ್ಕಾರ ಜಾರಿ ಮಾಡಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಹುಚ್ಚವ್ವನಹಳ್ಳಿ ಮಂಜುನಾಥ್ ಬಣ) ಹರಿಹರ ತಾಲ್ಲೂಕು ಸಮಿತಿಯಿಂದ ನಗರದಲ್ಲಿ ಗುರುವಾರ ಪ್ರತಿಭಟನೆ ನಡೆಸಿ ಗ್ರೇಡ್–2 ತಹಶೀಲ್ದಾರ್ ಪುಷ್ಪಾವತಿ ಅವರಿಗೆ ಮನವಿ ಸಲ್ಲಿಸಲಾಯಿತು.

ಕೇಂದ್ರ ಸರ್ಕಾರ ಪ್ರತಿ ಕ್ವಿಂಟಾಲ್ ಭತ್ತಕ್ಕೆ ರೂ.2320 ಕನಿಷ್ಠ ಬೆಂಬಲ ಬೆಲೆ ನಿಗದಿ ಮಾಡಿದೆ,ಆದರೆ ಇದಕ್ಕೆ ಯಾವುದೇ ಕಾನೂನಿನ ಮಾನ್ಯತೆ ಇಲ್ಲ, ಖರೀದಿದಾರರು, ದಲ್ಲಾಲರು, ಕಂಪನಿ ಖರೀದಿದಾರರು ತಮಗೆ ತಿಳಿದಂತೆ ಖರೀದಿ ಮಾಡಿ ರೈತರಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಜಿ.ಪ್ರಭುಗೌಡ ಆರೋಪಿಸಿದರು.

ಪ್ರಸ್ತುತ ಮಾರುಕಟ್ಟೆಯಲ್ಲಿ ಆರ್.ಎನ್. ಆರ್.ಸೋನಾಮಸೂರಿ ಭತ್ತಕ್ಕೆ ರೂ.1600 ದರ ಇದೆ, ರೈತರು ಒಂದು ಎಕರೆಯಲ್ಲಿ ಭತ್ತ ಬೆಳೆಯಲು 40 ರಿಂದ 45 ಸಾವಿರ ರೂಪಾಯಿ ಖರ್ಚು ಮಾಡಬೇಕಾಗುತ್ತದೆ. ಬೇಸಿಗೆ ಮತ್ತು ಮಳೆಗಾಲದಲ್ಲಿ ಭತ್ತ ಸರಾಸರಿ ಇಳುವರಿ 25 ಕ್ವಿಂಟಾಲ್ ಮಾತ್ರಇರುತ್ತದೆ. ರೂ.1600ದರದಲ್ಲಿ ಭತ್ತ ಮಾರಾಟವಾದರೆ ರೂ.40 ಸಾವಿರ ಮಾತ್ರ ರೈತರಿಗೆ ಸಿಗುತ್ತದೆ ಎಂದರು.

ಪ್ರತಿ ಎಕರೆಗೆ ರೈತರು ರೂ.6000 ನಷ್ಟವನ್ನು ಅನುಭವಿಸಬೇಕಾಗುತ್ತದೆ, ಈ ಹಿನ್ನಲೆಯಲ್ಲಿ ರಾಜ್ಯ ಸರ್ಕಾರ ಮಧ್ಯ ಪ್ರವೇಶಿಸಿ ಪ್ರತಿಕ್ವಿಂಟಾಲ್ ಭತ್ತಕ್ಕೆ ಕೇರಳ ಮಾದರಿಯಲ್ಲಿ ರೂ.1200 ಪ್ರೋತ್ಸಾಹಧನ ನೀಡಬೇಕು. ಕೇಂದ್ರ ಕನಿಷ್ಟ ಬೆಂಬಲ ಬೆಲೆ ಮತ್ತುರಾಜ್ಯ ಸರ್ಕಾರದ ಪ್ರೋತ್ಸಾಹ ಧನ ಸೇರಿ ಪ್ರತಿಕ್ವಿಂಟಾಲ್ ಬೆಲೆ ಭತ್ತಕ್ಕೆ ರೂ.3500 ಗಳನ್ನು ನೀಡುವ ವ್ಯವಸ್ಥೆ ಮಾಡಬೇಕೆಮದು ಆಗ್ರಹಿಸಿದರು.

ಇಂದು ಸಾಂಕೇತಿಕವಾಗಿ ಮನವಿ ಪತ್ರವನ್ನು ಸಲ್ಲಿಸುತ್ತಿದ್ದು, ಇದೇ ಶನಿವಾರ ರಸ್ತೆತಡೆ ಪ್ರತಿಭಟನೆ ಹಮ್ಮಿಕೊಂಡಿರುತ್ತೇವೆ, ಕಾಯ್ದೆ ಜಾರಿಯಾಗದಿದ್ದಲ್ಲಿ ಮುಂದಿನ ವಾರ ದಾವಣಗೆರೆ ಬಂದ್ ಮಾಡುವುದರ ಮೂಲಕ ಸರ್ಕಾರಕ್ಕೆ ಎಚ್ಚರಿಕೆಯನ್ನು ಕೊಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ಪದಾಧಿಕಾರಿಗಳಾದ ಗರಡಿಮನಿ ಬಸಣ್ಣ, ಮಹೇಶಪ್ಪ ದೊಗ್ಗಳ್ಳಿ, ರುದ್ರಗೌಡ ಪಾಳ್ಯ, ಹನುಮಂತಪ್ಪ, ಸುರೇಶ ದೀಟೂರು, ಹುಚ್ಚಯ್ಯ ಶೆಟ್ಟಿ ಕೊಕ್ಕನೂರು, ಟಿ.ನಿಜಗುಣ ಹಿಂಡಸಘಟ್ಟ, ಭೀಮಾನಾಯ್ಕ ಚಿನ್ನಸಮುದ್ರ, ಚಿಕ್ಕಮಲ್ಲನಹೊಳೆ ಚಿರಂಜೀವಿ, ರಾಜು ಸೇರಿದಂತೆ ಇತರರಿದ್ದರು.

# ಪಾಕಿಸ್ತಾನ ಪರ ಕಾಂಗ್ರೆಸ್‌ನವರ ಮೃದು ಧೋರಣೆಯೇ ಅನಾಹುತಕ್ಕೆ ಕಾರಣ



**ಪ್ರಮೋದ್ ಮುತಾಲಿಕ**

ದಾ ನಗರವಾಣಿ ಸುದ್ದಿ

ಕೊಟ್ಟೂರು : ಮಿತಿ ಮೀರಿದ ಭಯೋತ್ಪಾದನೆ, ನಿರಂತರ ಕೊಲೆ, ದೊಂಬಿ ನಡೆಸುತ್ತಿರುವ ಪಾಕಿಸ್ತಾನ ಕೃಪಾ ಪೋಷಿತ ಉಗ್ರರ ಬುಡ ಕಿತ್ತು ಹಾಕಲು ಪ್ರಧಾನಿ ನರೇಂದ್ರ ಮೋದಿ ಕೈಗೊಂಡಿರುವ ಕ್ರಮಗಳು ದಿಟ್ಟವಾಗಿವೆ. ಅವರ ನಡೆಸುತ್ತಿರುವ ಕಾರ್ಯಕ್ಕೆ ಇಡೀ ದೇಶವೇ ಬೆಂಬಲವಾಗಿ ನಿಂತಿದೆ ಎಂದು ಶ್ರೀ ರಾಮಸೇನಾ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಬುಧವಾರ ಮಾತನಾಡಿದ ಅವರು, ಪೆಹಲ್ಗಾಮ್ ಪ್ರವಾಸದಲ್ಲಿನ ಭಾರತೀಯರನ್ನು ಗುರಿಯಾಗಿಸಿಕೊಂಡು ಹಿಂದೂ ಎಂದು ತಿಳಿದುಕೊಂಡು ಹತ್ಯೆ ಮಾಡಿರುವುದು ಯಾರೂ ಸಹಿಸಲು ಸಾಧ್ಯವಿಲ್ಲ. ಈ ನಿಟ್ಟಿನಲ್ಲಿ ಉಗ್ರರನ್ನು ಮಟ್ಟ ಹಾಕಲು ಅವರ ಅಡಗುತಾಣ ಮತ್ತು ಅವರನ್ನು ಪೋಷಿಸುತ್ತಿರುವ ಪಾಕಿಸ್ತಾನ ಸೈನದ ನೆಲೆಗಳನ್ನು ನಾಶ ಮಾಡಿರುವ ನಮ್ಮ ದೇಶದ ಸೈನ್ಯದ ಕಾರ್ಯ ಮಹತ್ತರವಾಗಿದೆ. ಸೈನ್ಯಕ್ಕೆ ಕೇಂದ್ರ ಸರಕಾರ ಪೂರ್ಣ ಸ್ವಾತಂತ್ರ್ಯ ಕೊಟ್ಟ ಪರಿಣಾಮ ದಿಟ್ಟ ಉತ್ತರ ನೀಡಲು ಸಾಧ್ಯವಾಗಿದೆ. ಸದ್ಯಕ್ಕೆ ಕದನ ವಿರಾಮ ಘೋಷಣೆ ಸಮರ್ಪಕವಾಗಿದೆ. ಆದರೆ ಇದನ್ನು ಟ್ರಂಪ್ ಮಧ್ಯಸ್ಥಿಕೆ ವಹಿಸಿದ್ದು ಮಾತ್ರ ಸರಿಯಾದ ಕ್ರಮ ಅಲ್ಲ. ಇದ–ಕ್ಕೆ ಪ್ರಧಾನಿಗಳು ನೇರವಾಗಿ ದೇಶದ ಜನರಿಗೆ ಉತ್ತರ ನೀಡಬೇಕು ಎಂದರು.

ಈ ವಿಚಾರದಲ್ಲಿ ವಿಶೇಷ ಅಧಿವೇಶನ ಕರೆಯಬೇಕು ಎಂದು ಒತ್ತಾಯಿಸುವ ಕಾಂಗ್ರೆಸ್‌ಗೆ ನೈತಿಕತೆ ಇಲ್ಲ. ಪಾಕಿಸ್ತಾನ ಹಾಗೂ ಉಗ್ರರ ಕುರಿತು ಕಾಂಗ್ರೆಸ್‌ನವರ ಧೋರಣೆಯೇ ಇಂದಿನ ಎಲ್ಲ ಅನಾಹುತಕ್ಕೆ ಕಾರಣ. ದೇಶದಲ್ಲಿ ನಡೆದ ಭಯೋತ್ಪಾದನೆಗಳ ವಿರುದ್ಧ ಕಾಂಗ್ರೆಸ್ ಸರಕಾರಗಳು ಏನು ದಿಟ್ಟ ಕ್ರಮ ಕೈಗೊಂಡಿದ್ದರು. ಇದೀಗ ಪ್ರಧಾನಿ ಮೋದಿ ಪಾಕಿಸ್ತಾನದೊಳಗೆ ನುಗ್ಗಿ ಉಗ್ರರ ನೆಲೆ ಧ್ವಂಸ ಮಾಡುವ ಧೈರ್ಯ ಮಾಡಿದ್ದಾರೆ. ಇಂತಹ ಕ್ರಮಗಳನ್ನು ಅಂದೇ ಅನುಸರಿಸಿದ್ದರೆ ಉಗ್ರರು ಬಾಲ ಮುದುಡಿಕೊಳ್ಳುತ್ತಿದ್ದರು ಎಂದು ಹೇಳಿದರು.

ಲವ್ ಜಿಹಾದ್ ತಡೆಯಲು ಸಹಾಯವಾಣಿ ತೆ–ರೆದು ಸಹಾಯ ಮಾಡುತ್ತಿದ್ದೇವೆ. ನೇಹಾ ಹಿರೇಮಠ ಕೊಲೆ ನಡೆದು ವರ್ಷ ಕಳೆದರೂ ಕಾಂಗ್ರೆಸ್ ಸರಕಾರ ಆರೋಪಿಗಳನ್ನು ಬಂಧಿಸಲಿಲ್ಲ. ವರ್ಷದ ಶ್ರದ್ಧಾಂಜಲಿ ಪ್ರಯುಕ್ತ ಒಂದು ಸಾವಿರ ಯುವತಿಯರಿಗೆ ತ್ರಿಶೂಲ ದೀಕ್ಷೆ ನೀಡಿ ಸ್ವರಕ್ಷಣೆಗೆ ತಯಾರು ಮಾಡಿದ್ದೇನೆ. ರಾಜ್ಯದ 100 ಕಡೆಗಳಲ್ಲಿ ತ್ರಿಶೂಲ ದೀಕ್ಷೆ ಕಾರ್ಯಕ್ರಮ ಹಮ್ಮಿಕೊಳ್ಳುತ್ತೇನೆ. ಗೋವುಗಳ ಸಾಗಾಣಿಕೆಯಿಂದ ಪೊಲೀಸ್ ಇಲಾಖೆ ಹಫ್ತಾ ವಸೂಲು ಮಾಡುತ್ತಿದೆ. ಇದನ್ನು ತಡೆಯುವ ನಮ್ಮ ವಿರುದ್ಧ ಪ್ರಕರಣ ದಾಖಲು ಮಾಡುತ್ತಿದ್ದಾರೆ ಎಂದರು.

ರಾಜ್ಯ ಬಿಜೆಪಿಯಲ್ಲಿ ಬಹಳಷ್ಟು ಸುಧಾರಣೆಯಾಗಬೇಕಾಗಿದೆ. ಶಾಸಕ ಯತ್ನಾಳ್ ಬಹಿರಂಗವಾಗಿ ಹೇಳುವ ಎಲ್ಲ ವಿಷಯಗಳು ಸತ್ಯವಾಗಿವೆ. ಮುಸ್ಲಿಂ ಪರ ನಿಂತಿರುವ ಕಾಂಗ್ರೆಸ್‌ನವರಂತೆ ಬಿಜೆಪಿಯವರು ಹಿಂದೂಗಳ ಪರವಾಗಿ ಗಟ್ಟಿಯಾಗಿ ನಿಲ್ಲಬೇಕು. ಹಿಂದೂ ವಿರೋಧಿ ಕಾರ್ಯಗಳನ್ನು ನೇರವಾಗಿ ವಿರೋಧಿಸಬೇಕು ಎಂದು ಹೇಳಿದರು.

ಬಿಜೆಪಿ ಹಿರಿಯ ಮುಖಂಡ ಶೆಟ್ಟಿ ತಿಂದಪ್ಪ, ಚೌಡನಗೌಡ, ಬಿಜೆಪಿ ಯುವ ಮೋರ್ಚಾ ಕಾರ್ಯದರ್ಶಿ ಡಾ.ಶೆಟ್ಟಿ ರಾಕೇಶ್ ಇತರರು ಇದ್ದರು.

## ಪಾಲಿಕೆ ಮುಂದೆ ಅಣುಕು ಪ್ರದರ್ಶನ

ದಾವಣಗೆರೆ ಮೇ.15 ತುರ್ತು ಪರಿಸ್ಥಿತಿ ನಿಭಾಯಿಸುವ ಹಿನ್ನೆಲೆಯಲ್ಲಿ ಮೇ.18 ರಂದು ಸಂಜೆ 4 ರಿಂದ 7 ಗಂಟೆಯವರೆಗೆ ಮಹಾನಗರಪಾಲಿಕೆ ಆವರಣದಲ್ಲಿ ಆಪರೇಷನ್ ಅಭ್ಯಾಸ ರಡಿ ಅಣುಕು ಪ್ರದರ್ಶನವನ್ನು ಆಯೋಜಿಸಲಾಗಿದೆ.

ಅಣುಕು ಪ್ರದರ್ಶನದ ಪೂರ್ವಭ್ಯಾಸವನ್ನು ಮೇ.17 ರಂದು ಸಂಜೆ 4 ಗಂಟೆಗೆ ಮಹಾನಗರಪಾಲಿಕೆ ಕಾರ್ಯಾಲಯದಲ್ಲಿ ಆಯೋ ಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

ಅಶೋಕ
ದಿನ 4 ಆಟಗಳು
ಜನಭರಿತ 3ನೇ ವಾರ
ticket avabale bookmyshow
ಕನ್ನಡ ಚಿತ್ರ
ಸಮಯ: ಬೆ:–11ಕ್ಕೆ, ಮ–2ಕ್ಕೆ
ಸಮಯ: ಸಂ–6ಕ್ಕೆ, ರ–9ಕ್ಕೆ







ಗೋಲ್ಡನ್ ಕ್ಲಾಸ್: 200 ರೂ, ಬಾಲ್ಕನಿ: 150 ರೂ, ಫಸ್ಟ್ ಕ್ಲಾಸ್: 100 ರೂ

ಗೀತಾಂಜಲಿ
ದಿನ 4 ಆಟಗಳು
09–05–2025 ರಿಂದ ಪ್ರಾರಂಭ
ತೆಲುಗು ಚಿತ್ರ
ಸಮಯ: ಬೆ:–11ಕ್ಕೆ, ಮ–2ಕ್ಕೆ
ಸಮಯ: ಸಂ–6ಕ್ಕೆ, ರ–9ಕ್ಕೆ



ಸೂರಿ, ಐಶ್ವರ್ಯ ಲಕ್ಷ್ಮೀ ನಟಿಸಿರುವ: ಮಾಮನ್

# ಸುಗ್ರೀವಾಜ್ಞೆ ಮೂಲಕ ಬೆಂಬಲ ಬೆಲೆ ಕಾಯ್ದೆ ಜಾರಿಗೆ ತರುವಂತೆ ರೈತರ ಆಗ್ರಹ, ಬೈಕ್ ರ್‍ಯಾಲಿ



ದಾ ನಗರವಾಣಿ ಸುದ್ದಿ

ದಾವಣಗೆರೆ: ರಾಜ್ಯ ಸರ್ಕಾರ ರೈತರು ಬೆಳೆದ ಬೆಳೆಗಳಿಗೆ ಸುಗ್ರೀವಾಜ್ಞೆ ಮೂಲಕ ಕನಿಷ್ಟ ಬೆಂಬಲ ಬೆಲೆ ಕಾಯ್ದೆ ಜಾರಿಗೆ ತಂದು, ಕನಿಷ್ಟ ಬೆಲೆಗಿಂತ ಕಡಿಮೆ ಬೆಲೆಗೆ ಬೆಳೆಗಳನ್ನು ಖರೀದಿಸುವ ದಲ್ಲಾಳರನ್ನು, ಕಂಪನಿಯವರನ್ನು 5 ವರ್ಷ ಜೈಲಿಗೆ ಹಾಕುವ ಕಾನೂನು ಸೇರಿಸಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಹುಚ್ಚವ್ವನಹಳ್ಳಿ ಮಂಜುನಾಥ್ ಬಣದ ನೇತೃತ್ವದಲ್ಲಿ ರೈತರು ಬೈಕ್ ರ್‍ಯಾಲಿ ಮೂಲಕ ತೆರಳಿ ಜಿಲ್ಲಾಡಳಿತ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ನಗರದ ಜಯದೇವ ವೃತ್ತದಲ್ಲಿ ಹೊರಟ ಬೈಕ್ ರ್‍ಯಾಲಿ, ಎಪಿಎಂಸಿ ಮಾರುಕಟ್ಟೆ ಕಚೇರಿ ಮುಂದೆ ಘೋಷಣೆಗಳನ್ನು ಕೂಗಿ, ನಂತರ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಅಪರ ಜಿಲ್ಲಾಧಿಕಾರಿ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ರಾಜ್ಯಾಧ್ಯಕ್ಷ ಹುಚ್ಚವ್ವನಹಳ್ಳಿ ಮಂಜುನಾಥ್, ಕೇಂದ್ರ ಸರ್ಕಾರ ಪ್ರತಿ ಕ್ವಿಂಟಲ್ ಭತ್ತಕ್ಕೆ 2320 ಕನಿಷ್ಠ ಬೆಂಬಲ ಬೆಲೆ ನಿಗದಿ ಮಾಡಿದ್ದು, ಇದಕ್ಕೆ ಯಾವುದೇ ಕಾನೂನಿನ ಮಾನ್ಯತೆ ಇಲ್ಲದಾಗಿದೆ. ಖರೀದಿದಾರರು, ದಲ್ಲಾಲರು ಮನಸೋ ಇಚ್ಛೆ ಭತ್ತ ಖರೀದಿ ಮಾಡುತ್ತಿದ್ದಾರೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಆರ್.ಎನ್.ಆರ್, ಸೋನಾಮಸೂರಿ ಭತ್ತಕ್ಕೆ 1600 ದರ ಇದ್ದು, ರೈತರು ಒಂದು ಎಕರೆಯಲ್ಲಿ ಭತ್ತ ಬೆಳೆಯಲು 40 ರಿಂದ 45 ಸಾವಿರ ಖರ್ಚು ಮಾಡುತ್ತಾರೆ. ಬೇಸಿಗೆ ಮತ್ತು ಮಳೆಗಾಲದಲ್ಲಿ ಭತ್ತ ಸರಾಸರಿ ಇಳುವರಿ 25 ಕ್ವಿಂಟಲ್ ಬರಲಿದೆ. ಒಟ್ಟಾರೆ ಪ್ರತಿ ಎಕರೆಗೆ ರೈತನಿಗೆ 6 ಸಾವಿರ ರೂ ನಷ್ಟವನ್ನು ಅನುಭವಿಸುತ್ತಿದ್ದು, ರಾಜ್ಯ ಸರ್ಕಾರ ಮಧ್ಯ ಪ್ರವೇಶಿಸಿ ಕೇಂದ್ರದ ಕನಿಷ್ಟ ಬೆಂಬಲ ಬೆಲೆಗೆ ಕೇರಳ ಮಾದರಿಯಲ್ಲಿ 1200 ರೂ ಪ್ರೋತ್ಸಾಹ ಧನ ಸೇರಿಸಿ ಕ್ವಿಂಟಲ್ ಭತ್ತಕ್ಕೆ 3500 ರೂ ನೀಡಬೇಕು ಎಂದು ಆಗ್ರಹಿಸಿದರು.

ಮೂರು ವರ್ಷಗಳಿಂದ ಹೋರಾಟ ಮಾಡುತ್ತಿದ್ದರೂ ಕೇಂದ್ರ ಸರ್ಕಾರ ಕನಿಷ್ಟ ಬೆಂಬಲ ಬೆಲೆ ಕಾಯ್ದೆಯನ್ನು ಜಾರಿಗೊಳಿಸದೆ ನಿರ್ಲಕ್ಷ್ಯ ವಹಿಸಿದೆ. ಈಗಿರುವ ಕನಿಷ್ಟ ಬೆಂಬಲ ಬೆಲೆಗೆ ಯಾವುದೇ ಬೆಲೆ ಇಲ್ಲದಂತಾಗಿದೆ. ಆದ್ದರಿಂದ ರಾಜ್ಯ ಸರ್ಕಾರ ಕೂಡಲೇ ಮಧ್ಯ ಪ್ರವೇಶ ಮಾಡಿ ಸುಗ್ರೀವಾಜ್ಞೆ ಮೂಲಕ ಕನಿಷ್ಟ ಬೆಂಬಲ ಬೆಲೆ ಕಾಯ್ದೆಯನ್ನು ಜಾರಿ ಮಾಡುವ ಮೂಲಕ ರೈತರಿಗೆ ಅನುಕೂಲ ಮಾಡಬೇಕು ಎಂದರು.

ಸುಗ್ರೀವಾಜ್ಞೆ ಮೂಲಕ ಕಾಯ್ದೆ ಜಾರಿಗೆ ತಂದು ಕನಿಷ್ಟ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಗೆ ಭತ್ತ ಖರೀದಿಸುವ ದಲ್ಲಾಳರಿಗೆ, ಕಂಪನಿಯವರಿಗೆ 3 ರಿಂದ 5 ವರ್ಷ ಜೈಲು ಶಿಕ್ಷೆ, ಲೈಸೆನ್ಸ್ ರದ್ದು, ವ್ಯತ್ಯಾಸದ ಹಣಕ್ಕಿಂತ ಐದು ಪಟ್ಟು ಹಣವನ್ನು ರೈತನಿಗೆ ನೀಡುವಂತಹ ಕಾನೂನನ್ನು ಕಾಯ್ದೆಯಲ್ಲಿ ಸೇರಿಸಬೇಕು ಎಂದು ಒತ್ತಾಯಿಸಿದ ಅವರು, ಸರ್ಕಾರ ಎಚ್ಚೆತ್ತುಕೊಂಡು ಕಾಯ್ದೆ ಜಾರಿ ಮಾಡದೆ ಇದ್ದರೆ ಶನಿವಾರ ರಸ್ತೆ ತಡೆ ನಡೆಸಿ, ಮುಂದಿನ ವಾರ ದಾವಣಗೆರೆಯನ್ನು ಬಂದ್ ಮಾಡುವುದರ ಮೂಲಕ ಸರ್ಕಾರಕ್ಕೆ ಬಿಸಿ ಮುಟ್ಟಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಚಿನ್ನಸಮುದ್ರ ಭೀಮಾನಾಯ್ಕ, ಎಲೋದಳ್ಳಿ ರವಿಕುಮಾರ್, ಚಿಕ್ಕಮಲ್ಲನಹೊಳೆ ಚಿರಂಜೀವಿ, ರಾಜನಹಟ್ಟಿ ರಾಜು, ಹೂವಿನಮಡು ನಾಗರಾಜ, ಚಿಕ್ಕತೊಗಲೇರಿ ನಟರಾಜ, ಕೆಂಚಪ್ಪ, ನಿಂಗಪ್ಪ, ಯರವನಾಗತಿಹಳ್ಳಿ ಪರಮೇಶ್ವರಪ್ಪ, ಕೈದಾಳ್ ವಸಂತಕುಮಾರ್, ಆಲೂರು ಪರಶುರಾಮ ಸೇರಿದಂತೆ ಇತರರು ಇದ್ದರು.

# ಹೊಸಪೇಟೆ ಕಾಂಗ್ರೆಸ್ ಸಮಾವೇಶದಲ್ಲಿ ಲಕ್ಷ ಜನರಿಗೆ ವಿವಿಧ ಹಕ್ಕುಪತ್ರ: ಪ್ರಭಾ



ಹರಪನಹಳ್ಳಿ: ಸಾಮಾಜಿಕ ನ್ಯಾಯದ ಪರ ಕಾಂಗ್ರೆಸ್ ಸರ್ಕಾರ ಇದೆ. ನುಡಿದಂತೆ ನಡೆಯುವ ಸರ್ಕಾರ ನಮ್ಮದು ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಹೇಳಿದರು.

ಪಟ್ಟಣದ ಬಾಬು ಜಗಜೀವನ್ ರಾಂ ಭವನದಲ್ಲಿ ಗುರುವಾರ ಹೊಸಪೇಟೆಯಲ್ಲಿ ಮೇ.20 ರಂದು ನಡೆಯುವ ಸರ್ಕಾರದ ಎರಡು ವರ್ಷದ ಸಾಧನೆ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಕೇಂದ್ರ ಸರ್ಕಾದಿಂದ ರಾಜ್ಯಕ್ಕೆ ಬರಬೇಕಾದ ತೆರಿಗೆ ಹಣ ಕಡಿತವಾಗುತ್ತಿದೆ, ಈ ಬಗ್ಗೆ ನಾವೆಲ್ಲರೂ ಹೋರಾಟ ಮಾಡಬೇಕಾದ ಅನಿವಾರ್ಯ ಇದೆ, 1ರೂಪಾಯಿ ತೆರಿಗೆಯಲ್ಲಿ ಕೇಂದ್ರದಿಂದ ನಮಗೆ ಕೇವಲ 13 ಪೈಸೆ ಬರುತ್ತಿದೆ ಎಂದು ಆರೋಪಿಸಿದರು. ಹೊಸಪೇಟೆ ಮರಿಯಮ್ಮನಹಳ್ಳಿ ಹಾಗೂ ಶಿವಮೊಗ್ಗಕ್ಕೆ ಸಂಪರ್ಕಿಸುವ ರಾಜ್ಯ ಹೆದ್ದಾರಿ ಕಾಮಗಾರಿ ಶೀಘ್ರದಲ್ಲೇ ಪ್ರಾರಂಭವಾಗಲಿದೆ ಎಂದರು.

ಶಾಸಕಿ ಎಂ.ಪಿ.ಲತಾ ಮಲ್ಲಿಕಾರ್ಜುನ ಮಾತನಾಡಿ ಮೇ.20ರಂದು ಹೊಸಪೇಟೆಯಲ್ಲಿ ನಡೆಯುವ ಕಾಂಗ್ರೆಸ್ ಸರ್ಕಾರದ ಎರಡು ವರ್ಷದ ಸಾಧನೆ ಸಮಾವೇಶಕ್ಕೆ ಹರಪನಹಳ್ಳಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಎರಡು ವರ್ಷದ ಸಾಧನೆ ಸಮಾವೇಶದಲ್ಲಿ ರಾಜ್ಯದ ಒಂದು ಲಕ್ಷದ ಫಲಾನುಭವಿಗಳಿಗೆ ವಿವಿಧ ಹಕ್ಕುಪತ್ರಗಳನ್ನು ನೀಡಲಾಗುತ್ತಿದ್ದು, ಇದರಲ್ಲಿ ಅಖಂಡ ಬಳ್ಳಾರಿ ಜಿಲ್ಲೆಯಲಿಯೇ 26 ಸಾವಿರ ಜನ ಫಲಾನುವಿಗಳಿದ್ದಾರೆ ಎಂದು ಹೇಳಿದರು.

ಅತೀ ಹೆಚ್ಚು ಹಕ್ಕು ಪತ್ರ ಪಡೆಯುವ ಅಖಂಡ ಬಳ್ಳಾರಿ ಜಿಲ್ಲೆಯಲ್ಲಿ ಹರಪನಹಳ್ಳಿ ಮೊದಲ ಸ್ಥಾನದಲ್ಲಿದೆ ಎಂದು ತಿಳಿಸಿದರು.

ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಚ್.ಬಿ.ಮಂಜಪ್ಪ ಮಾತನಾಡಿ ಸಿದ್ದರಾಮಯ್ಯನವರು ಕಳೆದ ಅವಧಿಯಲ್ಲಿ ಗೊಲ್ಲರಟ್ಟಿ, ತಾಂಡ ಹಟ್ಟಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಲು ಮುಂದಾಗಿದ್ದರು ಅದರಂತೆ ಇಂದು ಹೊಸಪೇಟೆಯಲ್ಲಿ ಹಕ್ಕುಪತ್ರ ನೀಡುತ್ತಿದ್ದಾರೆ, ನುಡಿದಂತೆ ನಡೆದ ಸರ್ಕಾರ ದೇಶದಲ್ಲಿ ಯಾವುದಾದರೂ ಇದ್ದರೆ ಅದು ಕರ್ನಾಟಕ ಕಾಂಗ್ರೆಸ್ ಸರ್ಕಾರ ಎಂದರು

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ಭಟ್ ಮಾತನಾಡಿ ಕೊಟ್ಟ ಮಾತಿನಂತೆ ಸಿದ್ದರಾಮಯ್ಯನವರ ಸರ್ಕಾರ ಕೆಲಸ ಮಾಡುತ್ತಿದೆ ಎಂದರು. ಚಿಗಟೇರಿ ಬ್ಲಾಕ್ ಅಧ್ಯಕ್ಷ ಕೆ.ಕುಬೇರಪ್ಪ, ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ವೆಂಕಟೇಶ, ಮಾತನಾಡಿದರು.

ಪುರಸಭೆ ಅಧ್ಯಕ್ಷೆ ಪಾತೀಮಾಬೀ, ಚಿಗ-ಟೇರಿ ಬ್ಲಾಕ್ ಅಧ್ಯಕ್ಷ ಕೆ.ಕುಬೇರಪ್ಪ, ಅರಸೀಕೆರೆ ಬ್ಲಾಕ್ ಅಧ್ಯಕ್ಷ ಎಸ್.ಮಂಜುನಾಥ, ಎಚ್.ಬಿ.ಪರಶುರಾಮಪ್ಪ, ಎಂ.ರಾಜಶೇಖರ, ಶಶಿಧರ ಪೂಜಾರ, ಟಿ.ವೆಂಕಟೇಶ, ಪಿ.ಎಲ್.ಪೋಮ್ಯಾನಾಯ್ಕ್, ಮುತ್ತಿಗಿ ಜಂಬಣ್ಣ, ಬಿ.ಕೆ.ಪ್ರಕಾಶ, ಬಂಡ್ರಿ ಗೋಣಿಬಸಪ್ಪ, ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ, ತಹಶಿಲ್ದಾರ ಬಿ.ವಿ.ಗಿರೀಶಬಾಬು, ಮುಖ್ಯಾಧಿಕಾರಿ ಎರಗುಡಿ ಶಿವಕುಮಾರ್, ಇಒ ಚಂದ್ರಶೇಖರ, ದಾವಣಗೆರೆ ದಿನೇಶ್ ಕೆ.ಶೆಟ್ಟಿ, ಪುರಸಭೆ ಸದಸ್ಯರಾದ ಲಾಟಿ ದಾದಪೀರ, ಉದ್ದಾರ ಗಣೇಶ, ಜಾಕೀರ್ ಹುಸೇನ್, ಮುಖಂಡರಾದ ಹುಲಿಕಟ್ಟಿ ಚಂದ್ರಪ್ಪ, ರಾಮಣ್ಣ, ಯುವ ಕಾಂಗ್ರೆಸ್ ಅಧ್ಯಕ್ಷ ಚೌಡಪ್ಪ, ಎಚ್.ಟಿ.ಹನುಮಂತ ಮತ್ತೂರು ಬಸವರಾಜ, ಉದಯಶಂಕರ ಸೇರಿದಂತೆ ಇತರರು ಇದ್ದರು.

**ಕಲಿತ ನಾರಿ ಪ್ರಗತಿಗೆ ದಾರಿ**

# ಬೈಕ್‌ಗೆ ಕಾರು ಡಿಕ್ಕಿ; ಇಬ್ಬರ ಸಾವು



ದಾ ನಗರವಾಣಿ ಸುದ್ದಿ

ದಾವಣಗೆರೆ: ಕಾರು ಮತ್ತು ಬೈಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಇಬ್ಬರು ಯುವತಿಯರು ಮೃತಪಟ್ಟಿರುವ ಘಟನೆ ಗುರುವಾರ ಹರಿಹರ ತಾಲ್ಲೂಕಿನ ಕಡರನಾಯಕನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಸುಮಾ (22), ಪಲ್ಲವಿ (26) ಮೃತ ದುರ್ದೈವಿಗಳು. ಸ್ನೇಹಿತರ ಮದುವೆಗೆ ಹೋಗಿ ಕಡರನಾಯಕನಹಳ್ಳಿಯ ನಂದಿಗುಡಿ-ಎಕ್ಕೆಗೊಂದಿ ರಸ್ತೆಯಲ್ಲಿ ಎಕ್ಕೆಗೊಂದಿ ಕಡೆಗೆ ಬರುತ್ತಿದ್ದಾಗ, ನಂದಿಗುಡಿ ಕಡೆಗೆ ವೇಗವಾಗಿ ಹೋಗುತ್ತಿದ್ದ ಕಾರು ನಿಯಂತ್ರಣ ತಪ್ಪಿ ಬೈಕ್ ಡಿಕ್ಕಿ ಹೊಡೆದಿದೆ. ಸುಮಾ ತಲೆಗೆ ತೀವ್ರವಾಗಿ ಪೆಟ್ಟು ಬಿದ್ದಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿದ್ದರೆ, ತೀವ್ರವಾಗಿ ಪೆಟ್ಟು ಬಿದ್ದಿದ್ದ ಪಲ್ಲವಿ ಅವರನ್ನು ಆಸ್ಪತ್ರೆಗೆ ಸಾಗಿಸುವಾಗ ಮಾರ್ಗ ಮಧ್ಯದಲ್ಲಿ ಮೃತಪಟ್ಟಿದ್ದಾರೆ. ಬೈಕ್ ಓಡಿಸುತ್ತಿದ್ದ ಸಚಿನ್ ಎಂಬ ಯುವಕನಿಗೂ ತೀವ್ರ ಪೆಟ್ಟು ಬಿದ್ದಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ ಎಂದು ತಿಳಿದು ಬಂದಿದೆ. ಇನ್ನು ಈ ಕುರಿತು ಸುಮಾ ಸಂಬಂಧಿ ಕಾರು ಚಾಲಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ಮಲೇಬೆನ್ನೂರು ಠಾಣೆಯಲ್ಲಿ ದೂರು ನೀಡಿದ್ದಾರೆ. ಸ್ಥಳಕ್ಕೆ ಎಸ್ಪಿ ಉಮಾ ಪ್ರಶಾಂತ್ ಭೇಟಿ ನೀಡಿ ಪರಿಶೀಲಿಸಿದ್ದಾರೆ.

# 'ಸೇನೆ ಬರಲಿ ನೋಡ್ಕೊಳ್ತಿನಿ' ಅಂದ ನಿಮಿಷಗಳಲ್ಲೇ ಸತ್ತೋದ

ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾ ಜಿಲ್ಲೆಯ ಟ್ರಾಲ್ ಪ್ರದೇಶದಲ್ಲಿ ಇತ್ತೀಚೆಗೆ ನಡೆದ ಎನ್‌ಕೌಂಟರ್‌ನಲ್ಲಿ ಹತ್ಯೆಯಾದ ಮೂವರು ಭಯೋತ್ಪಾದಕರಲ್ಲಿ ಒಬ್ಬನಾದ ಆಮಿರ್ ನಜೀರ್ ವಾನಿಯ ಭಾವನಾತ್ಮಕ ವೀಡಿಯೊ ಹೊರಬಿದ್ದಿದೆ. ಈ ವಿಡಿಯೋದಲ್ಲಿ, ಅಮೀರ್ ಅವರ ತಾಯಿ ಕೊನೆಯ ಬಾರಿಗೆ ವೀಡಿಯೊ ಕರೆಯಲ್ಲಿ ಶರಣಾಗುವಂತೆ ಬೇಡಿಕೊಳ್ಳುತ್ತಿರುವುದು ಕಂಡುಬರುತ್ತದೆ, ಆದರೆ ಅಮೀರ್ ಸ್ಪಷ್ಟವಾಗಿ ಶಸ್ತ್ರಾಸ್ತ್ರ ಕೆಳಗಿಡಲು ನಿರಾಕರಿಸಿದ್ದು ಸೈನ್ಯ ಬರಲಿ, ಆಮೇಲೆ ನೋಡುತ್ತೇನೆ ಎಂದು ಹೇಳಿದ್ದ ಕೆಲ ಕ್ಷಣಗಳಲ್ಲೇ ಸೇನೆಯ ಗುಂಡಿಕ್ಕಿ ಬಲಿಯಾಗಿದ್ದಾನೆ.

## ಗಡುವು ವಿಧಿಸಲು ಸಂವಿಧಾನದಲ್ಲಿ ...

(1ನೇ ಪುಟದಿಂದ) ಮುಂದಿಟ್ಟಿದ್ದಾರೆ. ಸುಪ್ರೀಂ ಕೋರ್ಟ್‌ನ ನಡವಳಿಕೆಯು ವ್ಯವಸ್ಥೆಯ ಮೇಲೆ ಸಾಂವಿಧಾನಿಕ ಮೌಲ್ಯಗಳಿಗೆ ಸಂಪೂರ್ಣ ವಿರುದ್ಧವಾಗಿದೆ. ಈದು ಸಾಂವಿಧಾನಿಕ ಮಿತಿಯನ್ನು ಉಲ್ಲಂಘಿಸುತ್ತದೆ ಎಂದು ಕಿಡಿಕಾರಿದ್ದಾರೆ. 'ರಾಜ್ಯದ ಮಸೂದೆಗಳ ಬಗ್ಗೆ ನಿರ್ಧಾರ ತೆಗೆದುಕೊಳ್ಳಲು ರಾಜ್ಯಪಾಲರು ಮತ್ತು ರಾಷ್ಟ್ರಪತಿಗಳಿಗೆ ಗಡುವು ವಿಧಿಸುವುದು ಹೇಗೆ ಸಾಧ್ಯ? ಎಂದು ಪ್ರಶ್ನಿಸಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಂವಿಧಾನದ ಕಲಂ 200 ಮತ್ತು 201 ಅನ್ನು ಉಲ್ಲೇಖಿಸಿ, ಇದು ರಾಜ್ಯಪಾಲರುಗಳಿಗೆ ಮತ್ತು ರಾಷ್ಟ್ರಪತಿಗೆ ಅನ್ವಯ ಎಂಬುದಾಗಿ ಉಲ್ಲೇಖಿಸಿದ್ದಾರೆ. ಆ ಪ್ರಕಾರ, ವಿಧಾನಸಭೆ ಅಂಗೀಕರಿಸಿದ ಮಸೂದೆಗೆ ಒಪ್ಪಿಗೆ ನೀಡುವ ಅಥವಾ ತಿರಸ್ಕರಿಸುವ ಬಗ್ಗೆ ಅನುಸರಿಸಬೇಕಾದ ಯಾವುದೇ ಸಮಯದ ಚೌಕಟ್ಟನ್ನು ಈ ಎರಡು ಕಲಂಗಳಲ್ಲಿ ಉಲ್ಲೇಖಿಸಿಲ್ಲ ಎಂದು ಮುರ್ಮು ಸುಪ್ರೀಂ ಗಮನ ಸೆಳೆದಿದ್ದಾರೆ.

ಏನಿದು ಪ್ರಕರಣ?

ರಾಜ್ಯ ವಿಧಾನಸಭೆ ಅಂಗೀಕರಿಸಿದ್ದ 10 ಮಸೂದೆಗಳಿಗೆ ಗವರ್ನರ್ ಅಂಕಿತ ಹಾಕದೇ ಇರುವುದನ್ನು ಪ್ರಶ್ನಿಸಿ ತಮಿಳುನಾಡು ಸರ್ಕಾರ 2023ರ ನವೆಂಬರ್ ನಲ್ಲಿ ಗವರ್ನರ್ ವಿರುದ್ಧ ಸುಪ್ರೀಂಕೋರ್ಟ್ ಮೆಟ್ಟಿಲೇರಿತ್ತು. ಈ ಅರ್ಜಿಯ ವಾದ-ಪ್ರತಿವಾದ ಆಲಿಸಿದ್ದ ಸುಪ್ರೀಂಕೋರ್ಟ್ ಈ ತೀರ್ಪನ್ನು ನೀಡಿತ್ತು. ಇದಕ್ಕೆ ಉಪರಾಷ್ಟ್ರಪತಿ ಧನ್ಕರ್ ಆಕ್ಷೇಪ ವ್ಯಕ್ತಪಡಿಸಿ ಹೇಳಿಕೆ ನೀಡಿದ್ದರು. ರಾಜ್ಯಪಾಲರುಗಳ ಅಂಕಿತಕ್ಕೆ ಕಾಯ್ದಿರಿಸಿರುವ ಮಸೂದೆಗಳ ಬಗ್ಗೆ ರಾಷ್ಟ್ರಪತಿ ಮೂರು ತಿಂಗಳೊಳಗೆ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿತ್ತು.

## ಹರಿಹರ; 1.25 ಕೋ. ರೂ. ವೆಚ್ಚದಲ್ಲಿ...

(1ನೇ ಪುಟದಿಂದ)

ಪ್ರಗತಿಯಲ್ಲಿವೆ ಎಂದರು. ಈ ವೇಳೆ ಮುಖಂಡರಾದ ಮಾರುತಿ ಬೇಡರ್, ಸ್ಥಳೀಯ ನಿವಾಸಿಗಳಾದ ಕುಮಾರ್, ಶಂಕರ್, ಹನುಮಂತಪ್ಪ ಸೇರಿದಂತೆ ಇತರರು ಇದ್ದರು.

# ನನ್ನ ವಿರುದ್ಧ ಯಾವುದೇ ಹಗರಣಗಳಿಲ್ಲ ಇದ್ದರೆ ಬಿಡುಗಡೆ ಮಾಡಲಿ: ನಾಗರಾಜ್




ದಾ.ನಗರವಾಣಿ ಸುದ್ದಿ

ದಾವಣಗೆರೆ,ಮೇ.15:ಜಿಲ್ಲಾ ಉಸ್ತುವಾರಿ ಸಚಿವರ ವಿರುದ್ಧ ತಾವು ಮಾಡಿರುವ ಆರೋಪಗಳಿಗೆ ತಮ್ಮ ಬಳಿ ಸಾಕಷ್ಟು ಸಾಕ್ಷಿಗಳಿವೆ. ಬಿಜೆಪಿ ಹಿರಿಯ ನಾಯಕರೊಂದಿಗೆ ಸೇರಿ ಮುಖ್ಯಮಂತ್ರಿಗಳ ಗಮನಕ್ಕೆ ಬರುವಂತೆ ಬೆಂಗಳೂರಿನಲ್ಲಿಯೇ ಸಾಕ್ಷಿಗಳನ್ನು ಬಿಡುಗಡೆ ಮಾಡುವುದಾಗಿ ಬಿಜೆಪಿ ಮುಖಂಡ ಲೋಕಿ-ಕೆರೆ ನಾಗರಾಜ್ ಹೇಳಿದರು.

ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವರ ಕೆಲ ಹಿಂಬಾಲಕರು ತಮ್ಮ ಹಗರಣ ಬಯಲಿಗೆಳೆಯುವುದಾಗಿ ಹೇಳುತ್ತಿದ್ದಾರೆ. ಆದರೆ ತಮ್ಮ ಮೇಲೆ ಯಾವುದೇ ಕಪ್ಪು ಚುಕ್ಕೆ ಇಲ್ಲ. ಇದ್ದರೆ ಸಾಬೀತುಪಡಿಸಲಿ ಎಂದು ಸವಾಲು ಹಾಕಿದರು.


ಕಾಡು ಪ್ರಾಣಿಗಳನ್ನು ಸಾಕಾಣಿಕೆ ಮಾಡಿ, ಕೊಂದು ತಿಂದ ಪ್ರಕರಣವನ್ನು ವಜಾ ಮಾಡಿಸಿರಬಹುದು. ಆದರೆ ಅದಕ್ಕೆ ಸಂಬಂಧಿಸಿದ 400 ಪುಟಗಳ ಆರೋಪಪಟ್ಟಿಯ ದಾಖಲೆಯನ್ನು ಇಂಗ್ಲಿಷ್‌ಗೆ ಭಾಷಾಂತರಿಸಲಾಗುತ್ತಿದ್ದು, ಅದನ್ನು ಎಲ್ಲಿಗೆ ತಲುಪಿಸಬೇಕೋ ಅಲ್ಲಿಗೆ ತಲುಪಿಸುತ್ತೇನೆ. ಈ ವಿಚಾರದಲ್ಲಿ ನನ್ನ ಬಾಯಿ ಮುಚ್ಚಿಸುವುದು ಕೇವಲ ಭ್ರಮೆಯಷ್ಟೇ ಎಂದರು.

ಸಚಿವರ ಬಗ್ಗೆ ಮಾತನಾಡಿದರೆ ದಿನೇಶ್ ಶೆಟ್ಟಿ ನನ್ನನ್ನು 'ಬಚ್ಚಾ' ಎಂದು ಹೀಯಾಳಿಸುತ್ತಾರೆ. ಕಳೆದ 20 ವರ್ಷಗಳ ರಾಜಕೀಯ ಜೀವನದಲ್ಲಿ 9 ವರ್ಷ ಸಕ್ರಿಯ ರಾಜಕಾರಣದಲ್ಲಿ ಇದ್ದೇನೆ. ಹಿಂದಿನ ವಿಧಾನಸಭಾ ಚುನಾವಣೆಯಲ್ಲಿ 70 ಸಾವಿರ ಮತಗಳನ್ನು ಪಡೆದಿದ್ದೇನೆ. ಇಂತಹ ಹೇಳಿಕೆ ನೀಡುವ ಮೂಲಕ ಆ 70 ಸಾವಿರ ಮತದಾರರಿಗೆ ಅವಮಾನ ಮಾಡಿದ್ದೀರಿ. ಅನ್ಯರ ಆಶ್ರಯದಲ್ಲಿ ಬೆಳೆದಿರುವ ದಿನೇಶ್ ಶೆಟ್ಟಿಗೆ ಸ್ವ-ಂತ ಗುರುತಿಲ್ಲ. ಆದರೆ ತಾವು ಸ್ವಂತ ಪರಿಶ್ರಮದಿಂದ ಬೆಳೆದಿದ್ದೇನೆ ಎಂದು ತಿರುಗೇಟು ನೀಡಿದರು.

ಅಧಿಕಾರದ ಆಸೆ ಇಲ್ಲದೆ ಸಮಾಜ ಸೇವೆ ಮಾಡುತ್ತಿದ್ದೇನೆ. ಸೋತರೂ ಕ್ಷೇತ್ರವನ್ನು ಬಿಟ್ಟು ಹೋಗಿಲ್ಲ. ನಿಮ್ಮ ಹುಷಾರು' ಮತ್ತು ಕೆಟ್ಟ ಪರಿಣಾಮ ಎದುರಿಸಬೇಕಾದೀತು' ಎಂಬ ಬೆದರಿಕೆಗಳಿಗೆ ಹೆದರುವುದಿಲ್ಲ ಎಂದು ಪಾಲಿಕೆ ಮಾಜಿ ಸದಸ್ಯ ಗಡಿಗುಡಾಳ್ ಮಂಜುನಾಥ್ ಹೇಳಿಕೆಗೆ ಪ್ರತಿಕ್ರಿಯಿಸಿದ ಲೋಕಿಕೆರೆ ನಾಗರಾಜ್, ಕಳೆದ ಎರಡು ವರ್ಷಗಳ ಅಭಿವೃದ್ಧಿ ಬಗ್ಗೆ ಪ್ರಶ್ನಿಸಿದರೆ, ಸಚಿವರ ಹಿಂಬಾಲಕರು ಪದೇ ಪದೇ 25 ವರ್ಷಗಳ ಹಿಂದಿನ ಕಥೆಗಳನ್ನು ಹೇಳುತ್ತಾರೆ ಎಂದು ಟೀಕಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಿ.ಎಂ. ಸತೀಶ್ ಕೊಳೇನಹಳ್ಳಿ, ಮಂಜುನಾಥ್ ನಾಯಕ್, ಶ್ರೀನಿವಾಸ್, ಡಿ.ವಿ. ಜಯರುದ್ರಪ್ಪ, ನಾಗಣ್ಣ, ಪ್ರವೀಣ್ ಜಾಧವ್, ರಾಜುತೋಟಂಪುರ, ಚೇತನ್, ಅಜಯ್ ಮುಂತಾದವರು ಉಪಸ್ಥಿತರಿದ್ದರು.

## ಚಳ್ಳಕೆರೆ: ಅಂಬೇಡ್ಕರ್ ಭವನ ಉದ್ಘಾಟನೆ



ಚಳ್ಳಕೆರೆ: ಚಿತ್ರದುರ್ಗ ತಾಲ್ಲೂಕಿನ ತುರುವನೂರು ಹೋಬಳಿಯ ಕೂನಬೇವು ಗ್ರಾಮದಲ್ಲಿ ಶ್ರೀ ಕೊಲ್ಲಾಪುರದಮ್ಮ ದೇವಿ ದೇವಸ್ಥಾನದ ಉದ್ಘಾಟನೆ, ಕಳಸ ಪ್ರತಿಷ್ಠಾಪನಾ ಮತ್ತು ಡಾ. ಬಿ.ಆರ್.ಅಂಬೇಡ್ಕರ್ ಅವರ ಭವನದ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಶಾಸಕ ಟಿ. ರಘುಮೂರ್ತಿ ಭಾಗವಹಿದ್ದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಶ್ರೀಮತಿ ಟಿ.ಪದ್ಮ, ಉಪಾಧ್ಯಕ್ಷ ಜಯಣ್ಣ, ಗ್ರಾಮ ಪಂಚಾಯಿತಿ ಸದಸ್ಯ ಮಂಜಣ್ಣ, ನಾಗರಾಜ್, ಪವಿತ್ರ, ತಿಪ್ಪೇಸ್ವಾಮಿ, ಐಶ್ವರ್ಯ, ರತ್ನಮ್ಮ, ಮಲ್ಲಿಕಾರ್ಜುನ್, ಜ್ಯೋತಿ, ಮುಖಂಡರಾದ ಮಹಾಂತೇಶ್ ಉಪಸ್ಥಿತರಿದ್ದರು.

# ಮುಖ್ಯಮಂತ್ರಿ ಬಗ್ಗೆ ಆರ್.ಅಶೋಕ್ ಎಚ್ಚರಿಕೆಯಿಂದ ಮಾತನಾಡಬೇಕು

ದಾವಣಗೆರೆ.ಮೇ.15; ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಗ್ಗೆ ವ್ಯಂಗ್ಯ, ಕುಹಕದಿಂದ ಮಾತನಾಡುವುದು ವಿಧಾನಸಭಾ ವಿರೋಧ ಪಕ್ಷದ ನಾಯಕ ಆರ್.ಅಶೋಕ ಅವರಿಗೆ ಶೋಭೆ ತರುವುದಿಲ್ಲ ಎಂದು ಕಾಂಗ್ರೆಸ್ ಕಾರ್ಯಕರ್ತ ಎಚ್.ಹನುಮಂತಪ್ಪ ವಿರೋಧ ವ್ಯಕ್ತಪಡಿಸಿದ್ದಾರೆ.

ದಕ್ಷ, ಪ್ರಾಮಾಣಿಕ ಮುಖ್ಯಮಂತ್ರಿ ಹಾಗೂ ರಾಜ್ಯದ 7 ಕೋಟಿ ಮತದಾರರಿಂದ ಗೆದ್ದವರು,ಉತ್ತಮ ಆಲೋಚನೆ ಹೊಂದಿರುವ ಸಿದ್ದರಾಮಯ್ಯ ಅವರ ಬಗ್ಗೆ ಆರ್.ಅಶೋಕ್ ಗೌರವದಿಂದ ಮಾತನಾಡಬೇಕು. ಮಾತಿನಲ್ಲಿ ಹಿಡಿತ ಇಟ್ಟುಕೊಳ್ಳಬೇಕು. ಜವಾಬ್ದಾರಿಯುತ ವಿರೋಧಪಕ್ಷದ ನಾಯಕನಾಗಿ ಗೌರವ ಉಳಿಸಿಕೊಳ್ಳಬೇಕು, ಇಲ್ಲದಿದ್ದರೆ ಪರಿಣಾಮ ನೆಟ್ಟಗಿರುವುದಿಲ್ಲ ಎಂದು ಎಚ್.ಹನುಮಂತಪ್ಪ ಪತ್ರಿಕಾ ಹೇಳಿಕೆಯಲ್ಲಿ ಎಚ್ಚರಿಸಿದ್ದಾರೆ.

